# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 612
ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ
ಉತ್ತರಿಸುವ ದಿನಾಂಕ : 17.12.2021.
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ನಿಗಮ ಮಂಡಳಿಗಳಲ್ಲಿ ಫಲಾನುಭವಿಗಳ ಆಯ್ಕೆ ಮಾಡಲು ಇರುವ ಮಾನದಂಡಗಳೇನು: (ಸರ್ಕಾರದ ಸುತ್ತೋಲೆ, ನಡವಳಿಗಳ ಬಗ್ಗೆ ಸಂಪೂರ್ಣ ದಾಖಲಾತಿ ಪ್ರತಿಗಳೊಂದಿಗೆ ಮಾಹಿತಿ ನೀಡುವುದು) | ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಿವಿಧ ನಿಗಮಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಇರುವ ಮಾನದಂಡಗಳ ವಿವರ ಈ ಕೆಳಕಂಡಂತಿದೆ.<br>1) ಫಲಾಪೇಕ್ಷಿಯು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು ಮತ್ತು ಕಳೆದ 15 ವರ್ಷಗಳಿಂದ ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.<br>2) ಫಲಾಪೇಕ್ಷಿಯ ವಯೋಮಿತಿ 18 ರಿಂದ 60 ವರ್ಷ ವಯಸಾಗಿರಬೇಕು.<br>3) ಫಲಾಪೇಕ್ಷಿಯ ಕುಟುಂಬದ ವಾರ್ಷಿಕ ವರಮಾನವು ಗ್ರಾಮಿಣ ಪ್ರದೇಶವಾದಲ್ಲಿ ರೂ. 150000/- ಹಾಗೂ ನಗರ ಪ್ರದೇಶವಾದಲ್ಲಿ ರೂ. 200000/- ಮಿತಿಯೊಳಗಿರಬೇಕು.<br>4) ಜಿಲ್ಲೆಯಲ್ಲಿ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳ ಕಛೇರಿಯಲ್ಲಿ ಈಗಾಗಲೇ ನೊಂದಣಿ ಮಾಡಿಕೊಂಡ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಂಗವಿಕಲ ಫಲಾನುಭವಿಗಳು ಲಭ್ಯವಿರುವ ಪಟ್ಟಿಯಿಂದ ಅಂಗವಿಕಲರನ್ನು ನೇರವಾಗಿ ಸಂದರ್ಶನ ಮಾಡಿ ಸೌಲಭ್ಯ ಕಲ್ಪಿಸಲಾಗುವದು.<br>5) ಫಲಾಪೇಕ್ಷಿಯ ಕುಟುಂಬದವರು ಈ ಹಿಂದೆ ನಿಗಮದ ಯಾವುದೇ ಯೋಜನೆಯಡಿ ಸೌಲಭ್ಯ ಪಡೆದಿರಬಾರದು.<br>6) ಗಂಗಾ ಕಲ್ಯಾಣ ಯೋಜನೆಯಡಿ ಸೌಲಭ್ಯ ಪಡೆಯಲು ಫಲಾಪೇಕ್ಷಿಯು ಸಣ್ಣ ಮತ್ತು ಅತಿ ಸಣ್ಣ ರೈತರಾಗಿರಬೇಕು. |

| | | |
|---|---|---|
| | | 7) ಭೂ ಒಡೆತನ ಯೋಜನೆಯಡಿ ಸೌಲಭ್ಯ ಪಡೆಯಲು ಫಲಾಪೇಕ್ಷಿಯು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಭೂ ರಹಿತ ಮಹಿಳಾ ಕೃಷಿ ಕಾರ್ಮಿಕರಾಗಿರಬೇಕು, ಮತ್ತು ಜಮೀನು ಮಾರಾಟ ಮಾಡುವ ಭೂ ಮಾಲೀಕರು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿರಬಾರದು.<br>8) ವಾಹನ ಖರೀದಿಗಾಗಿ ಆರ್ಥಿಕ ನೆರವು ಬಯಸುವ ಫಲಾಪೇಕ್ಷಿಯು ಡ್ರೈವಿಂಗ್ ಲೆಸನ್ಸ್ ನೊಂದಿಗೆ ಬ್ಯಾಡ್ಜ್ ಹೊಂದಿರಬೇಕು.<br>9) ಫಲಾಪೇಕ್ಷಿಯ ಕುಟುಂಬದ ಯಾವುದೇ ಸದಸ್ಯರು ಸರ್ಕಾರಿ/ಅರೆ ಸರ್ಕಾರಿ ಸಂಸ್ಥೆಯಲ್ಲಿ ನೌಕರಿಯಲ್ಲಿರಬಾರದು.<br>ಈ ಯೋಜನೆಗಳಿಗೆ ಇರುವ ಆದೇಶ ಮತ್ತು ಸುತ್ತೋಲೆಗಳ ಪ್ರತಿಗಳನ್ನು **ಅನುಬಂಧ-1** ರಲ್ಲಿ ನೀಡಿದೆ. . |
| ಆ) | ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡ ಅಭಿವೃದ್ಧಿ ನಿಗಮವು 2018-19ರಿಂದ 2020-21ವರೆಗೆ ಆಯ್ಕೆ ಸಮಿತಿ ಸಭೆ ನಡೆಸದೆ ಬೀದರ್ ತಾಲ್ಲೂಕಿನಲ್ಲಿ ಆಯ್ಕೆ ಪಟ್ಟಿ ಸಿದ್ಧ ಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ಬಂದಿಲ್ಲ.<br>2018-19 ರಿಂದ 2020-21ನೇ ಸಾಲಿನವರೆಗಿನ ಆಯ್ಕೆ ಪಟ್ಟಿಯನ್ನು ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಿ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. |
| ಇ) | ಆಯ್ಕೆ ಸಮಿತಿಯ ಸಭೆ ನಡೆಸಿದ್ದಲ್ಲಿ ನಡವಳಿ ಹಾಗೂ ಆಯ್ಕೆ ಫಲಾನುಭವಿಗಳ ಪಟ್ಟಿ ಒದಗಿಸುವುದು? (ಆಯ್ಕೆ ಸಮಿತಿಯ ವಿವರ ನೀಡುವುದು) | **ಅನುಬಂಧ-2** ರಲ್ಲಿ ನೀಡಿದೆ |

ಸಂಖ್ಯೆ: ಸಕಇ 214 ಆರ್‌ಇಐ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು.



## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಡಾ॥ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತಗಳಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರಿಗೆ ಸ್ವಯಂ ಉದ್ಯೋಗ ಬ್ಯಾಂಕ್ ಲಿಂಕ್ಡ್ ಯೋಜನೆಗಳಿಗೆ ಸಹಾಯಧನವನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ:- 1) ಸರ್ಕಾರದ ಆದೇಶ ಸಂಖ್ಯೆ: ಸಕಇ 91 ಎಸ್‌ಡಿಸಿ 2014, ಬೆಂಗಳೂರು. ದಿನಾಂಕ: 20-06-2014.

2) ಏಕಕಡತ ಸಂಖ್ಯೆ: ಅಂಅನಿ / ಕ್ಯೆ&ತ / ಐಎಸ್‌ಬಿ / ಸ.ಉ/ 08, 2015-16, ದಿನಾಂಕ:21.10.2015.

ಪ್ರಸ್ತಾವನೆ:-

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ:20-06-2014ರ ಆದೇಶದಲ್ಲಿ ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಮತ್ತು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ನಿಯಮಿತಗಳಿಂದ 2014-15ನೇ ಸಾಲಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಸಾಲವನ್ನು ಬ್ಯಾಂಕುಗಳಿಂದ ಪಡೆಯಲು ಅನುಕೂಲವಾಗುವಂತೆ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮಗಳಿಂದ ಘಟಕ ವೆಚ್ಚ ರೂ.1.00 ಲಕ್ಷಗಳಿಗೆ ಮೀರಿದ ಪ್ರಕರಣಗಳಲ್ಲಿ ಮಾತ್ರ ಸಹಾಯಧನ ಗರಿಷ್ಠ ಮಿತಿಯನ್ನು ರೂ.1.00 ಲಕ್ಷಗಳಿಂದ ರೂ.2.00 ಲಕ್ಷಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಏಕಕಡತದಲ್ಲಿ ಗಂಗಾ ಕಲ್ಯಾಣ ಯೋಜನೆ, ಭೂ ಒಡೆತನ ಮತ್ತು ಮೈಕ್ರೋ ಕ್ರೆಡಿಟ್/ಮೈಕ್ರೋ ಫೈನಾನ್ಸ್ (ರೂ.25,000/- ವರೆಗೆ) ನೇರ ಸಾಲ ನೀಡಲಾಗುತ್ತಿದೆ. ಉಳಿದ ಸ್ವಯಂ ಉದ್ಯೋಗ ಚಟುವಟಿಕೆಗಳಿಗೆ ಸರ್ಕಾರದಿಂದ ಸಹಾಯದನ ಮತ್ತು ಬ್ಯಾಂಕ್‌ಗಳಿಂದ ಸಾಲ ನೀಡಲಾಗುತ್ತಿದೆ. ಆದರೆ ಪ್ರಸ್ತುತ ಸಹಾಯಧನ ಘಟಕ ವೆಚ್ಚ ರೂ.1.00 ಲಕ್ಷದವರೆಗೆ ಇದ್ದಲ್ಲಿ ಶೇ.50 ಪ್ರತಿಶತ ನೀಡಲಾಗುತ್ತದೆ ಮತ್ತು ಘಟಕ ವೆಚ್ಚ ರೂ.1.00 ಲಕ್ಷ ಮಿರಿದಲ್ಲಿ ಸಹಾಯಧನ ಶೇ.33% ಅಥವಾ ರೂ.2.00 ಲಕ್ಷದವರೆಗೆ ಸೀಮಿತಗೊಳಿಸಲಾಗಿದೆ. ಇದರಿಂದ ಬ್ಯಾಂಕ್‌ಗಳು ಹೆಚ್ಚಿನ ಸಂಖ್ಯೆಯಲ್ಲಿ ಸಾಲ ನೀಡಲು ಮುಂದಾಗುತ್ತಿಲ್ಲ. ಆದ್ದರಿಂದ ಬ್ಯಾಂಕ್ ಸಾಲ ಪಡೆಯಲು ಸಹಾಯಧನವನ್ನು ಹೆಚ್ಚಿಸುವುದು ಸೂಕ್ತವೆಂದು ಭಾವಿಸಿ, ಸ್ವಯಂ ಉದ್ಯೋಗ, ಬ್ಯಾಂಕ್ ಸಾಲ ಲಿಂಕ್ಡ್ ಯೋಜನೆಗಳಿಗೆ ಸಹಾಯಧನವನ್ನು ಈ ಕೆಳಕಂಡಂತೆ ಪರಿಷ್ಕರಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

| ಸ್ವಯಂ ಉದ್ಯೋಗ ಯೋಜನೆ | ಸಹಾಯಧನ | ಷರಾ |
|---|---|---|
| ಘಟಕ ವೆಚ್ಚ ರೂ.1.00 ಲಕ್ಷದಿಂದ ರೂ.5.00 ಲಕ್ಷಗಳವರೆಗೆ | 70% ಅಥವಾ ಗರಿಷ್ಠ ರೂ.3.50 ಲಕ್ಷ | ಉಳಿದ ಮೊತ್ತ ಬ್ಯಾಂಕ್ ಸಾಲ |
| ಘಟಕ ವೆಚ್ಚ ರೂ.5.00 ಲಕ್ಷಗಳಿಂದ ರೂ.10.00 ಲಕ್ಷಗಳವರೆಗೆ | 60% ಅಥವಾ ಗರಿಷ್ಠ ರೂ.5.00 ಲಕ್ಷ | ಉಳಿದ ಮೊತ್ತ ಬ್ಯಾಂಕ್ ಸಾಲ |
| ಘಟಕ ವೆಚ್ಚ ರೂ.10.00 ಲಕ್ಷಗಳಿಂದ ರೂ.20.00 ಲಕ್ಷಗಳವರೆಗೆ | 50% ಅಥವಾ ಗರಿಷ್ಠ ರೂ.5.00 ಲಕ್ಷ | ಉಳಿದ ಮೊತ್ತ ಬ್ಯಾಂಕ್ ಸಾಲ |

ಅದರಂತೆ, ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 394 ಎಸ್‌ಡಿಸಿ 2015, ಬೆಂಗಳೂರು, ದಿನಾಂಕ:16/03/2015.**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತಗಳಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರಿಗೆ ಸ್ವಯಂ ಉದ್ಯೋಗ, ಬ್ಯಾಂಕ್ ಲಿಂಕ್ಡ್ ಯೋಜನೆಗಳಿಗೆ ಘಟಕ ವೆಚ್ಚ ರೂ.1.00 ಲಕ್ಷಗಳಿಗೆ

ಪು.ತಿ.ನೋ

Cognizendum has to be issued

Please put up

ಮೀರಿದ ಪ್ರಕರಣಗಳಲ್ಲಿ ಮಾತ್ರ 2015-16ನೇ ಸಾಲಿನಿಂದ ಪ್ರಸ್ತುತ ಇರುವ ಸಹಾಯಧನವನ್ನು ರೂ.2.00 ಲಕ್ಷದ ರೂ.5.00 ಲಕ್ಷ (ರೂ. ಎರಡು ಲಕ್ಷಗಳಿಂದ ರೂ. ಐದು ಲಕ್ಷಗಳಿಗೆ ಮಾತ್ರ) ಗಳಿಗೆ ಹೆಚ್ಚಿಸಿ, ಈ ಕೆಳಕಂಡ ಷರತ್ತುಗೊಳಪಡಿಸಿ ಆದೇಶಿಸಲಾಗಿದೆ.

ಷರತ್ತುಗಳು:

1) ಮೇಲ್ಕಂಡ ಸಹಾಯಧನ ಬ್ಯಾಂಕ್ ಸಾಲ ಲಿಂಕ್ಡ್ ಸ್ವಯಂ ಉದ್ಯೋಗ ಯೋಜನೆಗಳಿಗೆ ಮಾತ್ರ ಅನ್ವಯಿಸುತ್ತದೆ.
2) ಶೇ.33% ಗುರಿಯನ್ನು ಮಹಿಳೆಯರಿಗೆ ಮೀಸಲಿಡುವುದು.
3) ಶೇ.3% ರಷ್ಟು ಗುರಿಯನ್ನು ವಿಕಲಚೇತನರಿಗೆ ಮೀಸಲಿಡುವುದು.
4) ಒಂದು ಕುಟುಂಬದಲ್ಲಿ ಒಬ್ಬರಿಗೆ ಮಾತ್ರ ಸ್ವಯಂ ಉದ್ಯೋಗದಡಿ ಅವಕಾಶ ನೀಡುವುದು.
5) ಈ ಯೋಜನೆಗಳಡಿಯಲ್ಲಿ ಅವಕಾಶ ಪಡೆದ ಫಲಾನುಭವಿಗಳು ಮತ್ತೆ 5 ವರ್ಷಗಳವರೆಗೆ ಯಾವುದೇ ಸೌಲಭ್ಯ ಪಡೆಯಲು ಮೀಸಲಿಡುವುದು.
6) ಶೇ.3% ರಷ್ಟು ಗುರಿಯನ್ನು ವಿಕಲಚೇತನರಿಗೆ ಮೀಸಲಿಡುವುದು.
7) ಈ ಯೋಜನೆಯ ಸೌಲಭ್ಯ ಪಡೆಯಲು ಗ್ರಾಮಾಂತರ ಪ್ರದೇಶದ ಫಲಾನುಭವಿಗಳ ವಾರ್ಷಿಕ ಆದಾಯ ರೂ.1.50 ಲಕ್ಷ ಮತ್ತು ನಗರ ಪ್ರದೇಶದಲ್ಲಿ ರೂ.2.00 ಲಕ್ಷ ಮೀರಬಾರದು.
8) ಕೃಷಿಯೇತರ ಸ್ವಯಂ ಉದ್ಯೋಗ ಚಟುವಟಿಕೆಗಳಿಗೆ ಫಲಾಪೇಕ್ಷಿತಗಳ ವಯೋಮಿತಿ ಕನಿಷ್ಠ 21 ವರ್ಷಗಳು ಮತ್ತು ಗರಿಷ್ಠ 50 ವರ್ಷಗಳ ಒಳಗಿರಬೇಕು.
9) ಕೃಷಿ ಮತ್ತು ಕೃಷಿ ಆದಾರಿತ ಚಟುವಟಿಕೆಗಳಿಗೆ ಫಲಾಪೇಕ್ಷಿತಗಳ ವಯೋಮಿತಿ ಕನಿಷ್ಠ 21 ವರ್ಷಗಳು ಮತ್ತು ಗರಿಷ್ಠ 60 ವರ್ಷಗಳ ಒಳಗಿರಬೇಕು.

ಈ ಆದೇಶವು ದಿನಾಂಕ:01-04-2016 ರಿಂದ ಜಾರಿಗೆ ತರಲಾಗಿದೆ. ಹಾಗೂ ಇದಕ್ಕೆ ತಗಲುವ ವೆಚ್ಚವನ್ನು 2015-16ನೇ ಸಾಲಿನ ಆಯವ್ಯಯದಲ್ಲಿ ಪರಿಶಿಷ್ಟ ಜಾತಿಗೆ ಸಂಬಂಧಿಸಿದಂತೆ ಲೆಕ್ಕಶೀರ್ಷಿಕೆ 2225-01-800-0-19, 2225-01-190-2-01 ಹಾಗೂ ಪರಿಶಿಷ್ಟ ಪಂಗಡಕ್ಕೆ ಸಂಬಂಧಿಸಿದಂತೆ ಲೆಕ್ಕಶೀರ್ಷಿಕೆ 2225-02-800-0-06 ರಲ್ಲಿ ನಿಗಮಗಳಿಗೆ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 1121 ವೆಚ್ಚ-3/2016, ದಿನಾಂಕ:17-02-2016ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಕೆ.ಪಿ. ರಾಮು)
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿದೆ.

ಪ್ರತಿಯನ್ನು:

1) ಮಹಾಲೇಖಪಾಲರು(ಎ ಮತ್ತು ಇ), ಕರ್ನಾಟಕ ಸರ್ಕಾರ, ಬೆಂಗಳೂರು
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
3) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4) ವ್ಯವಸ್ಥಾಪಕ ನಿರ್ದೇಶಕರು, ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂ.
6) ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-3 & 9), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8) ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
9) ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
10) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ನಿರುದ್ಯೋಗಿಗಳಿಗೆ ಸಾಮಾಜಿಕ ಉದ್ಯಮಶೀಲತಾ ಯೋಜನೆಯಡಿಯಲ್ಲಿ 'ಸಮೃದ್ಧಿ' ಉಪಯೋಜನೆಯಡಿಯಲ್ಲಿ ಆರ್ಥಿಕ ನೆರವು ನೀಡುವ ಬಗ್ಗೆ

ಓದಲಾಗಿದೆ: 2018-19ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-79 ಮತ್ತು 85ರಂತೆ

*****

<u>ಪ್ರಸ್ತಾವನೆ:</u>

2018-19ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-79ರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ 5000 ಯುವಕ/ಯುವತಿಯರಿಗೆ ಸಾಮಾಜಿಕ ಉದ್ಯಮಶೀಲತಾ ಯೋಜನೆ ಅಡಿ ಸರ್ಕಾರಿ ಮತ್ತು ಖಾಸಗಿ ಬ್ರಾಂಡೆಂಡ್ ಸಂಸ್ಥೆಗಳ ಸಹಯೋಗದೊಂದಿಗೆ ಆದಾಯ ತರುವ ಆರ್ಥಿಕ ಚಟುವಟಿಕೆಗಳನ್ನು ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಪ್ರಾರಂಭಿಸಲು ಸರ್ಕಾರದಿಂದ ಗರಿಷ್ಠ ರೂ.10.00 ಲಕ್ಷ ಆರ್ಥಿಕ ನೆರವನ್ನು ನೀಡಲಾಗುವುದೆಂದು ಘೋಷಿಸಲಾಗಿದೆ.

ಅದೇ ರೀತಿ ಆಯವ್ಯಯ ಭಾಷಣದ ಕಂಡಿಕೆ-85ರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿಗಳಿಗೆ ನೆರವಾಗಲು ಪ್ರವಾಸೋದ್ಯಮ, ಸಾರಿಗೆ ಕೆ.ಎಂ.ಎಫ್., ಇತ್ಯಾಧಿ ಇಲಾಖೆಗಳ ಸಹಯೋಗದೊಂದಿಗೆ ಟ್ಯಾಕ್ಸಿ, ಹೋಂ ಸ್ಟೇ ಇತರ ಸ್ವಯಂ ಉದ್ಯೋಗಗಳನ್ನು ಕೈಗೊಳ್ಳಲು ತರಬೇತಿ ನೀಡಲಾಗುವುದೆಂದು ಘೋಷಿಸಲಾಗಿದೆ.

ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ ಹಾಗೂ ಇತರ ನಿಗಮಗಳಿಂದ ಸಾಮಾಜಿಕ ಉದ್ಯಮಶೀಲತಾ ಯೋಜನೆಯಲ್ಲಿ 'ಸಮೃದ್ಧಿ ಯೋಜನೆ' ಎಂಬ ಉಪಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿಗಳಿಗೆ ಆರ್ಥಿಕ ನೆರವು ನೀಡಿ ಯೋಜನೆಯನ್ನು ಅನುಷ್ಠಾನಗೊಳಿಸಲು ಸದರಿ ನಿಗಮಗಳು ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸ್ವಯಂ ಉದ್ಯೋಗ ಕಲ್ಪಿಸಲು ಆಯವ್ಯಯದ ಭಾಷಣದ ಕಂಡಿಕೆ-79ರಲ್ಲಿ ಘೋಷಿಸಿರುವಂತೆ, ರೂ.10.00 ಲಕ್ಷಗಳವರೆಗೆ ಸಹಾಯಧನದ ರೂಪದಲ್ಲಿ ಅನುದಾನ ನೀಡಲು ಮತ್ತು ಸದರಿ ಅಭ್ಯರ್ಥಿಗಳಿಗೆ ಅನುದಾನ ನೀಡುವ ಮುಂಚೆ ವ್ಯಾಪಾರ ಚಟುವಟಿಕೆಗಳನ್ನು ನಡೆಸುವ ಬಗ್ಗೆ ಪ್ರಾಥಮಿಕ ತರಬೇತಿಗಳನ್ನು ಸಹ ನೀಡಲು ಪ್ರಸ್ತಾಪಿಸಲಾಗಿದೆ.

ಮೇಲ್ಕಂಡ ವಿಷಯಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಸರ್ಕಾರದ ಆದೇಶ ಹೊರಡಿಸಲು ನಿರ್ಧರಿಸಲಾಗಿದೆ.

***<u>ಸರ್ಕಾರಿ ಆದೇಶ ಸಂಖ್ಯೆ: ಸಕಇ 353 ಎಸ್‌ಡಿಸಿ 2018 (1), ಬೆಂಗಳೂರು, ದಿನಾಂಕ:25-10-2018</u>***

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, "ಸಮೃದ್ಧಿ ಯೋಜನೆ" ಅಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ನಿರುದ್ಯೋಗಿ ಯುವಕ/ಯುವತಿಯರಿಗೆ ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ರಾಜ್ಯ ಭೋವಿ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ ನಿಯಮಿತ ಮತ್ತು ಕರ್ನಾಟಕ

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತಗಳಿಂದ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರವು ಆದೇಶಿಸಿದೆ.

ಷರತ್ತುಗಳು:

1) ಸಮೃದ್ಧಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ/ಪಂಗಡದ ನಿರುದ್ಯೋಗಿಗಳಿಗೆ ಆದಾಯ ಬರುವಂತಹ ಆರ್ಥಿಕ ಚಟುವಟಿಕೆಗಳನ್ನು ಕೈಗೆತ್ತಿಕೊಳ್ಳಲು ವಿವಿಧ ಸಂಸ್ಥೆಗಳೊಂದಿಗೆ ಮಾರುಕಟ್ಟೆ/ತಾಂತ್ರಿಕ ಬೆಂಬಲ ಪಡೆಯಲು ಎಂ.ಓ.ಯು (ಒಡಂಬಡಿಕೆ) ಮಾಡಿಕೊಂಡು ಫಲಾನುಭವಿಗಳು ಸ್ವಯಂ ಉದ್ಯೋಗ ಘಟಕಗಳನ್ನು ಸ್ಥಾಪಿಸುವ ಮೂಲಕ ಉದ್ಯಮದಾರರಾಗಲು ಆರ್ಥಿಕ ನೆರವನ್ನು ನೀಡುವುದು. ಬ್ರಾಂಡೆಡ್ ಸಂಸ್ಥೆಗಳ ಸಹಯೋಗದೊಂದಿಗೆ ಸಮೃದ್ಧಿ ಯೋಜನೆಯನ್ನು ಅನುಷ್ಠಾನಗೊಳಿಸುವುದು.

2) ಮಳಿಗೆ ಸ್ಥಾಪಿಸಲು ಸೂಕ್ತ ಸ್ಥಳವನ್ನು ಫಲಾನುಭವಿಗಳೇ ಒದಗಿಸಿಕೊಳ್ಳತಕ್ಕದ್ದು ಮತ್ತು ಸ್ಥಳ ಹೊಂದಿದವರಿಗೆ ಆದ್ಯತೆ ನೀಡುವುದು.

3) ಸಹಾಯಧನ:- ಸಮೃದ್ಧಿ ಯೋಜನೆ ಅಡಿಯಲ್ಲಿ ಆಯ್ಕೆಯಾದ ಅರ್ಹ ಫಲಾನುಭವಿಗಳಿಗೆ ಅನುದಾನ ರೂಪದಲ್ಲಿ ರೂ.10.00 ಲಕ್ಷದವರೆಗೆ ಅಥವಾ ಆರ್ಥಿಕ ಚಟುವಟಿಕೆಗಳಿಗೆ ಅವಶ್ಯವಾಗುವ ಘಟಕದ ವೆಚ್ಚ, ಇದರಲ್ಲಿ ಯಾವುದು ಕಡಿಮೆಯೋ, ಅದನ್ನು ಧನಸಹಾಯದ ರೂಪದಲ್ಲಿ ನೀಡಿ ಅನುಷ್ಠಾನಗೊಳಿಸುವುದು. (ಸಾಲದ ಭಾಗ ಇರುವುದಿಲ್ಲ).

4) ಆಯ್ಕೆಯಾದ ಫಲಾನುಭವಿಗಳಿಗೆ ಬ್ರಾಂಡೆಡ್ ಸಂಸ್ಥೆಗಳೊಂದಿಗೆ ಅಗತ್ಯ ತರಬೇತಿ ನೀಡಲು ಆಯಾ ನಿಗಮಗಳಿಂದ ಸೂಕ್ತ ವ್ಯವಸ್ಥೆ ಮಾಡುವುದು. ಸಮೃದ್ಧಿ ಯೋಜನೆಯಡಿಯಲ್ಲಿ ಎಂ.ಓ.ಯು (ಒಡಂಬಡಿಕೆ) ಮಾಡಿಕೊಳ್ಳುವ ಸಂಸ್ಥೆಗಳಿಂದ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ವ್ಯಾಪಾರ ನಡೆಸಲು ಪ್ರಾಥಮಿಕ ಹಂತದ ತರಬೇತಿಯನ್ನು ನೀಡಿ ಯಶಸ್ವಿಯಾಗಿ ತರಬೇತಿ ಪೂರ್ಣಗೊಳಿಸಿ ದೃಢೀಕರಣ ಪತ್ರ ಪಡೆದ ನಂತರವೇ ಮಂಜೂರಾತಿ ನೀಡಿ ಆರ್ಥಿಕ ನೆರವನ್ನು ನೀಡುವುದು.

5) ಈ ಯೋಜನೆಯನ್ನು ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿರುವ ಡಾ। ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಹಾಗೂ ಕರ್ನಾಟಕ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮಗಳ ಮೂಲಕ ಅನುಷ್ಠಾನಗೊಳಿಸುವುದು. ಅನುದಾನದ ಲಭ್ಯತೆ ಮೇರೆಗೆ ಭೌತಿಕ ಮತ್ತು ಆರ್ಥಿಕ ಗುರಿಗಳನ್ನು (ವಿವೇಚನಾ ಕೋಟಾ ಸೇರಿದಂತೆ) ಪ್ರತ್ಯೇಕವಾಗಿ ನಿಗದಿಪಡಿಸಲಾಗುವುದು.

6) ಒಟ್ಟು ಗುರಿಯಲ್ಲಿ ನಿಯಮಾನುಸಾರ ಮಹಿಳಾ ಅಭ್ಯರ್ಥಿಗಳನ್ನು ಮತ್ತು ವಿಕಲಚೇತನ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದು. ಒಂದು ವೇಳೆ ಈ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ, ಪುರುಷ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದು. ಅಂತರ್ಜಾತಿ ವಿವಾಹವಾದ ಪ್ರಕರಣಗಳಿಗೆ ಆದ್ಯತೆ ನೀಡುವುದು.

7) ಅಭ್ಯರ್ಥಿಗಳ ಅರ್ಹತೆ:-

(ಅ) ಅರ್ಜಿದಾರರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜಾತಿಗಳಿಗೆ ಸೇರಿರಬೇಕು.

(ಆ) ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.



## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ವಿವಿಧ ಅಭಿವೃದ್ಧಿ ನಿಗಮಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದವರಿಗೆ ಘಟಕ ವೆಚ್ಚ ರೂ.50,000/- ವೆಚ್ಚದಲ್ಲಿ ಸ್ವಯಂ ಉದ್ಯೋಗಕ್ಕಾಗಿ ಸಹಾಯಧನ ಮತ್ತು ಸಾಲ ನೀಡುವ ಕುರಿತು.

ಓದಲಾಗಿದೆ. (1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ನಿ., ಇವರ ಪತ್ರ ಸಂಖ್ಯೆ:ಕಾಅನಿ/2020-21/12 ದಿ: 14-08-2020.

(2) ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳ ರಾಜ್ಯ ಅಭಿವೃದ್ಧಿ ಪರಿಷತ್ತಿನ ಸಭೆ ನಡವಳಿ ದಿನಾಂಕ: 28-05-2020.

******

**ಪ್ರಸ್ತಾವನೆ:**

ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳ ರಾಜ್ಯ ಅಭಿವೃದ್ಧಿ ಪರಿಷತ್ತಿನ ಸಭೆಯ ನಡವಳಿ ದಿನಾಂಕ: 28-05-2020ರಂದು 2020-21ನೇ ಸಾಲಿನ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ. ಕ್ರಿಯಾ ಯೋಜನೆಯನ್ನು ಅನುಮೋದಿಸಲಾಗಿದೆ. ಸಮಾಜ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ. ಕೋವಿಡ್-19 ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರಿಗೆ ಸ್ವಯಂ ಉದ್ಯೋಗ ಯೋಜನೆಯಲ್ಲಿ ತರಕಾರಿ, ಹಣ್ಣು-ಹಂಪಲು, ಮೀನು, ಮಾಂಸ ಮಾರಾಟ, ಕುರಿ/ಹಂದಿ/ಮೊಲ ಸಾಕಾಣಿಕೆ ಇತ್ಯಾದಿ ಕಿರು ಆರ್ಥಿಕ ಚಟುವಟಿಕೆಗಳಿಗಾಗಿ ಮಳಿಗೆ/ತಳ್ಳುಗಾಡಿ/ದುಡಿಮೆ ಬಂಡವಾಳ ಸೇರಿದಂತೆ ಗರಿಷ್ಠ ಘಟಕ ವೆಚ್ಚ ರೂ.50,000/-ರಲ್ಲಿ ನಿಗಮಗಳಿಂದ ಸಾಲ ಮತ್ತು ಸಹಾಯಧನ ನೀಡಲು ಅನುಮೋದಿಸಲಾಗಿರುತ್ತದೆ. (ಗರಿಷ್ಠ ಸಾಲ ರೂ.25,000/-, ಗರಿಷ್ಠ ಸಹಾಯಧನ ರೂ.25,000/-ಮಾತ್ರ).

ಸದರಿ ಸ್ವಯಂ ಉದ್ಯೋಗ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ನಿ., ಇವರು ಮೇಲೆ ಓದಲಾದ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಆದರೆ ಸದರಿ ಯೋಜನೆಯನ್ನು ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಇತರೆ ನಿಗಮಗಳಾದ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ಮತ್ತು ಪರಿಶಿಷ್ಟ ಜಾತಿಯ ಅಲೆಮಾರಿ, ಅರೆ-ಅಲೆಮಾರಿ, ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಸಮುದಾಯಗಳ ಅಭಿವೃದ್ಧಿ ಕೋಶ ಸೇರಿದಂತೆ ಎಲ್ಲಾ ನಿಗಮಗಳಿಗೂ 2020-21ನೇ ಸಾಲಿಗೆ ಮಾತ್ರ ಅನ್ವಯಿಸುವಂತೆ ಅನುಷ್ಠಾನಗೊಳಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಸರ್ಕಾರದ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 195 ಎಸ್‌ಡಿಸಿ 2020,**
**ಬೆಂಗಳೂರು, ದಿನಾಂಕ: 10-09-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಬರುವ ವಿವಿಧ ಅಭಿವೃದ್ಧಿ ನಿಗಮಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯದವರ ಅಭಿವೃದ್ಧಿಗಾಗಿ ಸ್ವಯಂ ಉದ್ಯೋಗ ಯೋಜನೆಯಡಿ ತರಕಾರಿ, ಹಣ್ಣು-ಹಂಪಲು, ಮೀನು, ಮಾಂಸ ಮಾರಾಟ ಕುರಿ/ಹಂದಿ/

19.9.2020

...ಮೊಲ ಸಾಕಾಣಿಕೆ ಇತ್ಯಾದಿ ಕಿರು ಆರ್ಥಿಕ ಚಟುವಟಿಕೆಗಳಿಗಾಗಿ ಮಳಿಗೆ/ತಳ್ಳುಗಾಡಿ/ದುಡಿಮೆ ಬಂಡವಾಳ ಸೇರಿದಂತೆ ಗರಿಷ್ಠ ಘಟಕ ವೆಚ್ಚ ರೂ.50,000/- ರಲ್ಲಿ ಶೇ.50% ಸಾಲ (ಗರಿಷ್ಠ ರೂ.25,000/-) ಮತ್ತು ಶೇ.50% ಸಹಾಯಧನ (ಗರಿಷ್ಠ ರೂ.25,000/-) ನೀಡುವ ಸ್ವಯಂ ಉದ್ಯೋಗ ಯೋಜನೆಯನ್ನು 2020-21ನೇ ಸಾಲಿಗೆ ಮಾತ್ರ ಅನ್ವಯಿಸುವಂತೆ ಅನುಷ್ಠಾನಗೊಳಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿದೆ.

ಷರತ್ತುಗಳು:

1) ಸಾಲ ಮತ್ತು ಸಹಾಯಧನವನ್ನು ಚಟುವಟಿಕೆಗಳ ಆಧಾರದ ಮೇಲೆ ಮಂಜೂರು ಮಾಡುವುದು ಮತ್ತು ಈ ಕೆಳಕಂಡ ದಾಖಲಾತಿಗಳನ್ನು ಫಲಾನುಭವಿಗಳಿಂದ ಪಡೆಯತಕ್ಕದ್ದು.

- ಪ್ರಾಮಿಸರಿ ನೋಟು (Promissory Note).
- ಸಾಲ ಕರಾರು ಪತ್ರ (Loan Agreement).
- ಮರುಪಾವತಿ ಪತ್ರ (Letter of Repayment).
- ಪ್ರತಿಫಲ ರಸೀದಿ ಪತ್ರ (Consideration Receipt).
- ಆಧಾರ ಪತ್ರ (Hypothecation Deed).
- ಖಾತರಿ ಪತ್ರ (Letter of Guarantee).

ಎಲ್ಲಾ ನಿಗಮಗಳು ಮೇಲ್ಕಂಡ ದಾಖಲೆಗಳ ನಮೂನೆಗಳನ್ನು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿರುವಂತೆ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದಿಂದ ಪಡೆಯತಕ್ಕದ್ದು.

2) ಫಲಾನುಭವಿಗಳಿಗೆ ಸಾಲ ನೀಡಿದ ಬಗ್ಗೆ ಸಾಲ ನಿರ್ವಹಣೆ ವಹಿಯನ್ನು ನಿಗಮಗಳ ಮುಖ್ಯಸ್ಥರು ನಿರ್ವಹಿಸತಕ್ಕದ್ದು (Loan Registrar).

3) ಮರುಪಾವತಿ ಅವಧಿ:- ಸದರಿ ಯೋಜನೆಯಲ್ಲಿ ಪಡೆದ ಸಾಲವನ್ನು ಫಲಾನುಭವಿ ವಾರ್ಷಿಕ ಶೇ.4 ರ ಬಡ್ಡಿ ದರದಲ್ಲಿ 18 ತಿಂಗಳ ಒಳಗೆ ಮರುಪಾವತಿಸಬೇಕು. ಮಂಜೂರಾತಿಯಾಗಿ 3 ತಿಂಗಳ ನಂತರ ಮರುಪಾವತಿ ಪ್ರಾರಂಭಿಸತಕ್ಕದ್ದು.

4) ಫಲಾಪೇಕ್ಷಿಗಳು ಸಾಲ ಮತ್ತು ಸಹಾಯಧನವನ್ನು ಕೋರಿರುವ ಚಟುವಟಿಕೆಗಳಿಗೆ ಉಪಯೋಗ ಮಾಡಿಕೊಂಡಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳತಕ್ಕದ್ದು.

5) ಯಾವುದೇ ಕಾರಣಕ್ಕೆ ಸಹಾಯಧನ ಮತ್ತು ಸಾಲದ ಮೊತ್ತ ದುರುಪಯೋಗವಾದಂತೆ ಎಚ್ಚರಿಕೆ ವಹಿಸತಕ್ಕದ್ದು. ಫಲಾನುಭವಿಯು ಸಾಲದ ಮೊತ್ತದಿಂದ ಆರ್ಥಿಕ ಚಟುವಟಿಕೆ ಕೈಗೊಳ್ಳಲು ಮಳಿಗೆ/ಸಾಮಗ್ರಿಗಳು ಇತ್ಯಾದಿ ಪಡೆದಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳತಕ್ಕದ್ದು.

6) ಸಾಲ ಮರುಪಾವತಿ ಮಾಡದ ಫಲಾನುಭವಿಗಳ ಬಗ್ಗೆ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು.

ಈ ಆದೇಶವನ್ನು ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 28-05-2020 ರಂದು ಜರುಗಿದ ಅನುಸೂಚಿತ ಜಾತಿಗಳು/ಅನುಸೂಚಿತ ಪಂಗಡಗಳ ರಾಜ್ಯ ಅಭಿವೃದ್ಧಿ ಪರಿಷತ್ತಿನಲ್ಲಿ ಅನುಮೋದಿಸಿದ ನಡವಳಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
10/9/2020
(ಪಿ.ಎನ್.ನಾಗರಾಜ್)
ಸರ್ಕಾರ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:

(1) ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
(2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

.....3

(ಇ) ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ. ಉತ್ತೀರ್ಣರಾಗಿರಬೇಕು.

(ಈ)ವಯಸ್ಸು ಕನಿಷ್ಠ 21 ವರ್ಷಗಳು, ಗರಿಷ್ಠ 50 ವರ್ಷಗಳು

(ಉ)ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ರೂ.5.00 ಲಕ್ಷಗಳ ಮಿತಿಯೊಳಗಿರತಕ್ಕದ್ದು.

(ಊ)ಕಳೆದ 3 ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ನಿಗಮಗಳಿಂದ ವಿವಿಧ ಯೋಜನೆಗಳಡಿಯಲ್ಲಿ ರೂ.1.00 ಲಕ್ಷಕ್ಕಿಂತ ಮೇಲ್ಪಟ್ಟ ಸಹಾಯಧನ/ಸಾಲ ಪಡೆದವರು ಈ ಯೋಜನೆ ಅಡಿ ಸೌಲಭ್ಯ ಪಡೆಯಲು ಅರ್ಹರಲ್ಲ.

8) ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ:-

ಹೆಚ್ಚಿನ ವಿದ್ಯಾರ್ಹತೆ ಮತ್ತು ವಯೋಮಾನವನ್ನು ಆಧರಿಸಿ ಜೇಷ್ಠತಾ ಪಟ್ಟಿ ಸಿದ್ದಪಡಿಸಿ, ಅದರಂತೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದು. ಮಳಿಗೆಗಳನ್ನು ನಡೆಸಲು ಸ್ವಂತ/ಬಾಡಿಗೆ ಸ್ಥಳ ಹೊಂದಿರುವವರಿಗೆ ಆದ್ಯತೆ ನೀಡುವುದು.

9) ಇತರೆ ಷರತ್ತುಗಳು:

(i) ಆಯ್ಕೆಯಾದ ಅಭ್ಯರ್ಥಿಗಳು ಯೋಜನೆ ಷರತ್ತುಗಳನ್ವಯ ಮಳಿಗೆಗಳನ್ನು ನಡೆಸತಕ್ಕದ್ದು.

(ii) ಸಮೃದ್ಧಿ ಯೋಜನೆ ಅಡಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸುವುದು ಮತ್ತು ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ ಇವರು ಇತರ ನಿಗಮಗಳ ಪರವಾಗಿ ಈ ಬಗ್ಗೆ ಸಮನ್ವಯಾಧಿಕಾರಿಯಾಗಿ ಕಾರ್ಯನಿರ್ವಹಿಸತಕ್ಕದ್ದು. ಮೇಲ್ಕಂಡ ಮಾನದಂಡಗಳಂತೆ ಅರ್ಹ ಫಲಾನುಭವಿಗಳ ಪಟ್ಟಿಯನ್ನು ತಯಾರಿಸಿ ನಿಗದಿತ ಗುರಿಯಂತೆ ಆಯ್ಕೆ ಮಾಡಿ ಯೋಜನೆಯನ್ನು ಅನುಷ್ಠಾನಗೊಳಸುವುದು.

ಮೇಲ್ಕಂಡ ಯೋಜನೆಗೆ ಪ್ರಸ್ತಾಪಿಸಿದ ವೆಚ್ಚವನ್ನು 2018-19ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಲೆಕ್ಕ ಶೀರ್ಷಿಕೆ:2225-01-796-0-02 (ವಿವಿಧ ಅಭಿವೃದ್ಧಿ ಯೋಜನೆಯಡಿ) ಹಾಗೂ 4225-01-796-0-01 (ವಿವಿಧ ಅಭಿವೃದ್ಧಿ ಯೋಜನೆ) ಒದಗಿಸಿದ ಅನುದಾನದಿಂದ ಭರಿಸುವುದು. ಅದೇ ರೀತಿ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಲೆಕ್ಕ ಶೀರ್ಷಿಕೆ:2225-02-794-0-05 (ವಿವಿಧ ಅಭಿವೃದ್ಧಿ ಯೋಜನೆಯಡಿ) ಹಾಗೂ 4225-02-794-0-01 (ವಿವಿಧ ಅಭಿವೃದ್ಧಿ ಯೋಜನೆ) ಒದಗಿಸಿದ ಅನುದಾನದಿಂದ ಭರಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:ಆಇ 678 ವೆಚ್ಚ-3/2018 ದಿನಾಂಕ: 12-10-2018ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಬಿ. ಪ್ರಕಾಶ್) 26/10/18
ಸರ್ಕಾರದ ಉಪ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

ಗೆ:-

1) ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು

2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು
4) ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ,
5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ,
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಭೋವಿ ಅಭಿವೃದ್ಧಿ ನಿಗಮ ನಿಯಮಿತ,
7) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ನಿಯಮಿತ
8) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ ನಿಯಮಿತ
9) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ
10) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

<u>ಪ್ರತಿಗಳು:</u>

1) ಸಮಾಜ ಕಲ್ಯಾಣ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು
3) ಸರ್ಕಾರದ ಜಂಟಿ/ಉಪ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ
4) ಸರ್ಕಾರದ ಅಧೀನ ಕಾರ್ಯದರ್ಶಿ-1, 2 & 3 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ

******

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮಹಿಳಾ ಸ್ವಸಹಾಯ ಸಂಘಗಳಿಗೆ ಪ್ರೇರಣಾ ಯೋಜನೆ ಅಡಿ ಆರ್ಥಿಕ ಚಟುವಟಿಕೆಗಳಿಗಾಗಿ ಮೈಕ್ರೋಕ್ರೆಡಿಟ್ ಯೋಜನೆಯನ್ನು ಸಂಬಂಧಿಸಿದ ನಿಗಮಗಳಿಂದ ಜಾರಿಗೊಳಿಸುವ ಬಗ್ಗೆ.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು ಇವರ ಏಕಕಡತ ಸಂಖ್ಯೆ:ಅಂಅನಿ/ಕ್ರ ಓತ/ ಕಿಸಾಪ-69/2018-19 ದಿನಾಂಕ:21-08-2018

1319
23/4/19

*****

ಪ್ರಸ್ತಾವನೆ:

ಮೇಲೆ ಓದಲಾದ ಏಕಕಡತ ಪ್ರಸ್ತಾವನೆಯಲ್ಲಿ ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಮೈಕ್ರೋಕ್ರೆಡಿಟ್ (ಕಿರುಸಾಲ) ಯೋಜನೆ ಲೆಕ್ಕಶೀರ್ಷಿಕೆ 2225-01-190-2-09/4225-01-190-0-03 ಇದರಡಿಯಲ್ಲಿ ಮಹಿಳಾ ಸ್ವಸಹಾಯ ಗುಂಪುಗಳ ಸದಸ್ಯರಿಗೆ ತಲಾ ರೂ.10,000/- ಸಹಾಯಧನ ಮತ್ತು ರೂ.5,000/- ನೇರಸಾಲ ಒಟ್ಟು ರೂ.15,000/-ಗಳನ್ನು ಅತಿ ಸಣ್ಣ ವ್ಯಾಪಾರ ವಹಿವಾಟು ಮಾಡಲು ನೀಡಲಾಗುತ್ತಿದೆ. ಅಲ್ಲದೇ ಮೈಕ್ರೋಫೈನಾನ್ಸ್-1 ಯೋಜನೆ ಲೆಕ್ಕಶೀರ್ಷಿಕೆ 2225-01-190-2-01 ಅಡಿಯಲ್ಲಿ ಸಣ್ಣ ಮತ್ತು ಅತಿಸಣ್ಣ ವ್ಯಾಪಾರದ ಘಟಕವನ್ನು ಸ್ಥಾಪಿಸಲು ರೂ.10,000/- ಸಹಾಯಧನ ಮತ್ತು ರೂ.15,000/- ನೇರಸಾಲ ಸೇರಿದಂತೆ ಒಟ್ಟು ರೂ.25,000/-ಗಳನ್ನು ನೀಡಲಾಗುತ್ತಿದೆ. ಮಹಿಳಾ ಸಮೃದ್ಧಿ ಯೋಜನೆ ಲೆಕ್ಕಶೀರ್ಷಿಕೆ 2225-01-190-2-01 ಇದರಡಿ ಸಣ್ಣ ಮತ್ತು ಅತಿ ಸಣ್ಣ ವ್ಯಾಪಾರದ ಘಟಕವನ್ನು ಸ್ಥಾಪಿಸಲು ರೂ.15,000/- ಸಹಾಯಧನ ಮತ್ತು ರೂ.10,000/- ನೇರಸಾಲವನ್ನು ನೀಡಲಾಗುತ್ತಿದೆ.

ಮೇಲ್ಕಂಡ ಸಹಾಯಧನ ಮತ್ತು ಸಾಲವನ್ನು ಫಲಾನುಭವಿಗಳ ಖಾತೆಗಳಿಗೆ ಬಿಡುಗಡೆ ಮಾಡಲಾಗುತ್ತಿದೆ. ಸದರಿ ಯೋಜನೆಗಳನ್ನು ಉತ್ತಮಗೊಳಿಸಲು ಮಹಿಳಾ ಸ್ವಸಹಾಯ ಸಂಘದ ಮೂಲಕ ಆದಾಯ ಗಳಿಸುವ ಉತ್ಪಾದನಾ/ಸೇವಾ ಘಟಕಗಳನ್ನು ಆರಂಭಿಸಲು ಮೈಕ್ರೋಕ್ರೆಡಿಟ್ ಯೋಜನೆಯನ್ನು ಪರಿಷ್ಕರಣೆ ಮಾಡಲು ಕೋರಿರುತ್ತಾರೆ.

ಪ್ರತಿ ಮಹಿಳಾ ಸದಸ್ಯರಿಗೆ ರೂ.15,000/- ಸಹಾಯಧನ ಮತ್ತು ರೂ.10,000/- ಸಾಲ ಸೇರಿದಂತೆ ಒಟ್ಟು ರೂ.25,000/-ಗಳಂತೆ ಒಟ್ಟಾರೆ ರೂ.2.50 ಲಕ್ಷಗಳನ್ನು ಉತ್ಪಾದನಾ/ಸೇವಾ ಸ್ವಸಹಾಯ ಗುಂಪುಗಳಿಗೆ ಕನಿಷ್ಠ 10 ಮಹಿಳಾ ಸದಸ್ಯರಿರುವ ಸ್ವಸಹಾಯ ಸಂಘಗಳಿಗೆ ನೀಡಲು ಸರ್ಕಾರದ ಆದೇಶ ಹೊರಡಿಸುವಂತೆ ವ್ಯವಸ್ಥಾಪಕ ನಿರ್ದೇಶಕರು, ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಸರ್ಕಾರದ ಆದೇಶ ಹೊರಡಿಸಲು ನಿರ್ಧರಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಕಇ 301 ಎಸ್‌ಡಿಸಿ 2018, ಬೆಂಗಳೂರು, ದಿನಾಂಕ:21.02.2019.

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮಹಿಳಾ ಸ್ವಸಹಾಯ ಗುಂಪುಗಳಿಗೆ 'ಪ್ರೇರಣಾ ಯೋಜನೆ - ಮೈಕ್ರೋಕ್ರೆಡಿಟ್' ಎಂಬ ಹೆಸರಿನಲ್ಲಿ ಮಹಿಳಾ ಸ್ವಸಹಾಯ ಸಂಘಗಳ ಒಟ್ಟು ಸದಸ್ಯರಿಗೆ ರೂ.15,000/- ಸಹಾಯಧನ ಮತ್ತು ರೂ.10,000/- ನೇರಸಾಲ ಸೇರಿದಂತೆ ಒಟ್ಟು ರೂ.25,000/-ಗಳನ್ನು ಈ ಕೆಳಕಂಡ ಷರತ್ತುಗೊಳಪಟ್ಟು ಅನುಷ್ಠಾನಗೊಳಿಸಲು ಸರ್ಕಾರವು ಅನುಮೋದನೆ ನೀಡಿ ಆದೇಶಿಸಿದೆ.

ಷರತ್ತುಗಳು:

1) ಈಗ ಚಾಲ್ತಿಯಲ್ಲಿರುವ ಅ) ಮೈಕ್ರೋಕ್ರೆಡಿಟ್ (ಕಿರುಸಾಲ) ಯೋಜನೆ, ಆ) ಮೈಕ್ರೋಫೈನಾನ್ಸ್-1 ಯೋಜನೆ ಮತ್ತು ಇ) ಮಹಿಳಾ ಸಮೃದ್ಧಿ ಯೋಜನೆಗಳನ್ನು 'ಪ್ರೇರಣಾ ಯೋಜನೆ - ಮೈಕ್ರೋಕ್ರೆಡಿಟ್' ನಲ್ಲಿ ವಿಲೀನಗೊಳಿಸಿದೆ.

2) ಕನಿಷ್ಠ 10 ಮಹಿಳೆಯರು ಸ್ವಸಹಾಯ ಗುಂಪಿನಲ್ಲಿ ಸದಸ್ಯರಿರತಕ್ಕದ್ದು. ಈ ಪೈಕಿ ಕನಿಷ್ಠ ಶೇ.80 ರಷ್ಟು ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಕ್ಕೆ ಸೇರಿರಬೇಕು. ಸದರಿ ಸ್ವಸಹಾಯ ಸಂಘ ನೋಂದಣಿಯಾಗಿ ಸಂಘ ಆಗಿರಬೇಕು. ಸಂಘದ ಸದಸ್ಯರು ಬಿ.ಪಿ.ಎಲ್./ಪಡಿತರ ಚೀಟಿ ಮತ್ತು ಆಧಾರ್ ಕಾರ್ಡ್ ಹೊಂದಿರಬೇಕು.

3) ಸಂಘದ ಹೆಸರಿನಲ್ಲಿ ಬ್ಯಾಂಕ್ ಖಾತೆ ಹೊಂದಿರಬೇಕು.

4) ಸಂಘದ ಸದಸ್ಯರು ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹೊಂದಿರಬೇಕು ಹಾಗೂ 18 ವರ್ಷಕ್ಕೆ ಮೇಲ್ಪಟ್ಟಿರಬೇಕು.

5) ಒಬ್ಬ ಸದಸ್ಯರಿಗೆ ಒಟ್ಟು ರೂ.25,000/- ರಂತೆ (ರೂ.15,000/- ಸಹಾಯಧನ ರೂ.10,000/- ಸಾಲ) ಒಟ್ಟು 10 ಸದಸ್ಯರಿಗೆ ಒಟ್ಟು ರೂ.2.50 ಲಕ್ಷ ನೀಡುವುದು. ಒಂದು ವೇಳೆ ಸಂಘದಲ್ಲಿ 10ಕ್ಕಿಂತ ಹೆಚ್ಚಿನ ಸದಸ್ಯರಿದ್ದಲ್ಲಿ, ಸದರಿ ಸಂಖ್ಯೆಗನುಗುಣವಾಗಿ ಸಾಲ-ಸಹಾಯಧನ ನೀಡುವುದು.

6) ಸದರಿ ಸ್ವಸಹಾಯ ಸಂಘ ಆದಾಯ ಬರುವ ಆರ್ಥಿಕ ಚಟುವಟಿಕೆಗಳಾದ ಉತ್ಪಾದನಾ/ಸೇವಾ ಘಟಕಗಳನ್ನು ಕೈಗೊಳ್ಳತಕ್ಕದ್ದು.

7) ಸದರಿ ಸಂಘ ಹಣಕಾಸಿನ ವಹಿವಾಟು ಮತ್ತು ಸಾಲ-ಸಹಾಯಧನವನ್ನು ಬಳಸಿಕೊಳ್ಳುತ್ತಿರುವ ಬಗ್ಗೆ ಅಗತ್ಯ ದಾಖಲೆಗಳನ್ನು ವಿವರಗಳೊಂದಿಗೆ ಸಲ್ಲಿಸತಕ್ಕದ್ದು.

8) ನಿಗಮಗಳಿಂದ ಸಹಾಯಧನ ಮತ್ತು ಸಾಲವನ್ನು ನೇರವಾಗಿ ಘಟಕದ ಚಟುವಟಿಕೆಗಳ ಆಧಾರದ ಮೇಲೆ 2 ಕಂತುಗಳಲ್ಲಿ ಸಂಘದ ಬ್ಯಾಂಕ್ ಖಾತೆಗೆ ನೀಡುವುದು.

9) ಸದರಿ ಸಂಘದವರು ಅಧ್ಯಕ್ಷರು ಮತ್ತು ಕಾರ್ಯದರ್ಶಿಯವರನ್ನು ಆಯ್ಕೆ ಮಾಡಿಕೊಂಡು ಅವರ ಜಂಟಿ ಸಹಿಯೊಂದಿಗೆ ಅನುದಾನವನ್ನು ಬಳಸಿಕೊಳ್ಳುವುದು. ಆದರೆ ಅಧ್ಯಕ್ಷರು ಮತ್ತು ಕಾರ್ಯದರ್ಶಿ ಕಡ್ಡಾಯವಾಗಿ ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಕ್ಕೆ ಸೇರಿರತಕ್ಕದ್ದು.

10) ಪ್ರೇರಣಾ ಯೋಜನೆಯನ್ನು ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ, ಕರ್ನಾಟಕ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮಗಳು ಅವರ ವ್ಯಾಪ್ತಿಯಲ್ಲಿ ಬರುವ ಫಲಾನುಭವಿಗಳಿಗೆ ಈ ಸೌಕರ್ಯಗಳನ್ನು ಒದಗಿಸುವುದು.

11) ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ ಜಾತಿಗಳು ಸಂಬಂಧಿಸಿದ ಆಯಾ ಅಭಿವೃದ್ಧಿ ನಿಗಮಕ್ಕೆ ಅರ್ಜಿ ಸಲ್ಲಿಸತಕ್ಕದ್ದು.

12) ಸ್ವಸಹಾಯ ಸಂಘದವರು ನಿಗಮಗಳಿಂದ ನೀಡಿದ ಸಾಲವನ್ನು ವಾರ್ಷಿಕವಾಗಿ ಶೇ.4ರ ಬಡ್ಡಿದರದಲ್ಲಿ ಸಾಲ ಮತ್ತು ಬಡ್ಡಿಯನ್ನು 3 ವರ್ಷಗಳಲ್ಲಿ ಮಾಸಿಕ/ತ್ರೈಮಾಸಿಕ ಕಂತುಗಳಲ್ಲಿ ಮರುಪಾವತಿ ಮಾಡತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು ಸಮಾಜ ಕಲ್ಯಾಣ ಇಲಾಖೆಯ ವಿವಿಧ ಕಾರ್ಯಕ್ರಮಗಳಡಿ ಹಂಚಿಕೆಯಾಗಿರುವ ಲೆಕ್ಕಶೀರ್ಷಿಕೆ 2225-01-190-2-09/4225-01-190-0-03 ಮತ್ತು 2225-02-190-2-07/4225-02-190-1-02 ರಡಿ ಭರಿಸತಕ್ಕದ್ದು.

ಮೈಕ್ರೋಕ್ರೆಡಿಟ್ ಯೋಜನೆ:- ಮಹಿಳಾ ಸ್ವಸಹಾಯ ಯೋಜನೆಗೆ ಸಹಾಯಧನ ರೂ.15,000/- ಮತ್ತು ಸಾಲ ರೂ.10,000/- ನೀಡಲು 2018-19ನೇ ಸಾಲಿನ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ. ರಾಜ್ಯ ಅಭಿವೃದ್ಧಿ ಪರಿಷತ್ತಿನ ಸಭೆ ದಿನಾಂಕ:28-09-2018ರಲ್ಲಿ ಅನುಮೋದನೆಗೊಂಡಿರುತ್ತದೆ.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಆಇ 05 ಬಿಇಪಿ 2018, ದಿನಾಂಕ: 05-04-2018ರನ್ವಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ರಮೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು (ಜಿ & ಇ ಲೆಕ್ಕ.ಪರಿಶೋಧನೆ-1, 2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.

5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ, ಬೆಂಗಳೂರು.
7. ವಿಶೇಷಾಧಿಕಾರಿ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ, ಬೆಂಗಳೂರು.
10. ಜಂಟಿ ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.

<u>ಪ್ರತಿಗಳು:-</u>

1. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-3 ಮತ್ತು 9) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ವಿಷಯ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ನಿರುದ್ಯೋಗಿಗಳಿಗೆ 'ಐರಾವತ' ಯೋಜನೆಯಡಿಯಲ್ಲಿ ಪ್ರವಾಸಿ ಟ್ಯಾಕ್ಸಿಗಳನ್ನು ಒದಗಿಸುವ ಬಗ್ಗೆ

ಓದಲಾಗಿದೆ: 2018-19ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-79 ಮತ್ತು 85ರಂತೆ

*****

**ಪ್ರಸ್ತಾವನೆ:**

2018-19ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ 5000 ಯುವಕ/ಯುವತಿಯರಿಗೆ ಸಾಮಾಜಿಕ ಉದ್ಯಮಶೀಲತಾ ಯೋಜನೆ ಅಡಿ ಸರ್ಕಾರಿ ಮತ್ತು ಖಾಸಗಿ ಬ್ರಾಂಡೆಂಡ್ ಸಂಸ್ಥೆಗಳ ಸಹಯೋಗದೊಂದಿಗೆ ಆದಾಯ ತರುವ ಆರ್ಥಿಕ ಚಟುವಟಿಕೆಗಳನ್ನು ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಪ್ರಾರಂಭಿಸಲು ಸರ್ಕಾರದಿಂದ ಗರಿಷ್ಠ ರೂ.10.00 ಲಕ್ಷ ಆರ್ಥಿಕ ನೆರವನ್ನು ನೀಡಲಾಗುವುದೆಂದು ಘೋಷಿಸಲಾಗಿದೆ. ಅದೇ ರೀತಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿಗಳಿಗೆ ನೆರವಾಗಲು ಪ್ರವಾಸೋದ್ಯಮ, ಸಾರಿಗೆ ಕೆ.ಎಂ.ಎಫ್., ಇತ್ಯಾಧಿ ಇಲಾಖೆಗಳ ಸಹಯೋಗದೊಂದಿಗೆ ಟ್ಯಾಕ್ಸಿ, ಹೋಂ ಸ್ಟೇ ಇತರ ಸ್ವಯಂ ಉದ್ಯೋಗಗಳನ್ನು ಕೈಗೊಳ್ಳಲು ತರಬೇತಿ ನೀಡಲಾಗುವುದೆಂದು ಘೋಷಿಸಲಾಗಿದೆ.

ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಇತರ ನಿಗಮಗಳಿಂದ ಸಾಮಾಜಿಕ ಉದ್ಯಮಶೀಲತಾ ಯೋಜನೆ ಅಡಿಯಲ್ಲಿ ಪ್ರವಾಸಿ ಟ್ಯಾಕ್ಸಿ ನೀಡಲು "ಐರಾವತ" ಯೋಜನೆ ಎಂದು ಪರಿಗಣಿಸಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿಗಳಿಗೆ ಸದರಿ ಯೋಜನೆಯನ್ನು ಅನುಷ್ಠಾನಗೊಳಸಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಗಳಲ್ಲಿ ಈಗಾಗಲೇ ಜಾರಿಯಲ್ಲಿರುವ ಸ್ವಯಂ ಉದ್ಯೋಗ, (ಐ.ಎಸ್.ಬಿ) ಯೋಜನೆ ಅಡಿಯಲ್ಲಿರುವಂತೆ ಪ್ರವಾಸಿ ಟ್ಯಾಕ್ಸಿಗಳಿಗೆ ಸಹ ಶೇ.50% ಅಥವಾ ಗರಿಷ್ಠ ರೂ.5.00 ಲಕ್ಷ ಸಹಾಯಧನ ನೀಡಲು ಮತ್ತು ಅಗತ್ಯವಿರುವ ಉಳಿದ ಮೊತ್ತವನ್ನು ಫಲಾನುಭವಿಗಳು, ಬ್ಯಾಂಕ್/ಹಣಕಾಸು ಸಂಸ್ಥೆ ಭರಿಸುವ ಮೂಲಕ ಈ ಯೋಜನೆಯನ್ನು ಅನುಷ್ಠಾನಗೊಳಸಲು ಕೋರಿರುತ್ತಾರೆ.

ಪ್ರಸ್ತಾಪಿತ "ಐರಾವತ" ಯೋಜನೆ ಅಡಿಯಲ್ಲಿ ಈಗಾಗಲೇ ಪ್ರವಾಸಿ ಟ್ಯಾಕ್ಸಿಗಳನ್ನು ನಡೆಸಲಾಗುತ್ತಿರುವ ಉಬರ್ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲ್ಲು ಮೇಲ್ಕಂಡ ನಿಗಮಗಳಿಗೆ ಅನುಮತಿ ನೀಡಲಾಗಿರುತ್ತದೆ. ಪ್ರಸ್ತುತ ಉಬರ್ ಸಂಸ್ಥೆ ಬೆಂಗಳೂರು, ಮಂಗಳೂರು, ಮೈಸೂರು, ಹುಬ್ಬಳ್ಳಿ , ಧಾರವಾಡ ನಗರಗಳಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಅದೇ ರೀತಿಯಲ್ಲಿಯೇ ಓಲಾ, ಇತ್ಯಾದಿ ಸಂಸ್ಥೆಗಳು ಕಾರ್ಯ ನಿರ್ವಹಿಸುತ್ತಿರುವ ಅಥವಾ ಕಾರ್ಯ ನಿರ್ವಹಿಸುವ ಇತರ ನಗರ ಪ್ರದೇಶಗಳಲ್ಲಿ ಸಹ ಎಂ.ಓ.ಯು. (ಒಡಂಬಡಿಕೆ) ಮಾಡಿಕೊಳ್ಳುವುದು. ಸದರಿ ಸಂಸ್ಥೆಗಳು ಇಲ್ಲದೇ ಇರುವ ಇತರ ನಗರ/ ಗ್ರಾಮೀಣ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಟ್ಯಾಕ್ಸಿಗಳನ್ನು ಖರೀದಿಸಲು ಪ್ರತ್ಯೇಕವಾಗಿ ಆರ್ಥಿಕ ನೆರವು ನೀಡಲಾಗುವುದು.

ಮೇಲ್ಕಂಡ ವಿಷಯಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಸರ್ಕಾರ ಆದೇಶ ಹೊರಡಿಸಿದೆ.



***ಸರ್ಕಾರಿ ಆದೇಶ ಸಂಖ್ಯೆ: ಸಕಇ 353 ಎಸ್‌ಡಿಸಿ 2018 (2), ಬೆಂಗಳೂರು, ದಿನಾಂಕ:25-10-2018***

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ "ಐರಾವತ ಯೋಜನೆ" ಅಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ನಿರುದ್ಯೋಗಿ ಯುವಕ/ಯುವತಿಯರಿಗೆ ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ,

3/11

3-11-18

ಕರ್ನಾಟಕ ರಾಜ್ಯ ಭೋವಿ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ನಿಯಮಿತ ಮತ್ತು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತಗಳಿಂದ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರವು ಆದೇಶಿಸಿದೆ.

ಷರತ್ತುಗಳು:

(1) ಓಲಾ/ಉಬರ್ ಸಂಸ್ಥೆಗಳು ಪ್ರಸ್ತುತ ಬೆಂಗಳೂರು, ಮೈಸೂರು, ಹುಬ್ಬಳ್ಳಿ, ಬಳ್ಳಾರಿ ಮತ್ತು ಮಂಗಳೂರು ನಗರಗಳಲ್ಲಿ ಟ್ಯಾಕ್ಸಿ ಸೇವೆಯನ್ನು ಒದಗಿಸುತ್ತಿದ್ದು, ಸದರಿ ನಗರಗಳಲ್ಲಿ ಈ ಸಂಸ್ಥೆಗಳ ಫ್ಲಾಟ್‌ಫಾರಂ ಮೂಲಕ ಟ್ಯಾಕ್ಸಿ ಸೇವೆಯನ್ನು ಒದಗಿಸಲು ಇಚ್ಛಿಸಿರುವ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಂದ ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ ಇವರು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸುವುದು. ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ ಇವರು ಅರ್ಜಿಗಳನ್ನು ಆಹ್ವಾನಿಸುವುದು.

(2) ಈ ಯೋಜನೆಯಡಿಯಲ್ಲಿ ಭೌತಿಕ ಮತ್ತು ಆರ್ಥಿಕ ಗುರಿಗಳನ್ನು ಪ್ರತ್ಯೇಕವಾಗಿ ನಿಗದಿಪಡಿಸಲಾಗುವುದು (ವಿವೇಚನಾ ಕೋಟಾ ಸೇರಿದಂತೆ).

(3) ಅಭ್ಯರ್ಥಿಗಳ ಅರ್ಹತೆ:-

(ಅ) ಅರ್ಜಿದಾರರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜಾತಿಗಳಿಗೆ ಸೇರಿರಬೇಕು.

(ಆ) ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. ಈ ಯೋಜನೆ ಅಡಿಯಲ್ಲಿ ರಾಜ್ಯದ ಯಾವುದೇ ಜಿಲ್ಲೆಯಲ್ಲಿರುವ ಅಭ್ಯರ್ಥಿಗಳು ಉಬರ್/ಓಲಾ ಮತ್ತು ಇತರ ಸಂಸ್ಥೆಗಳ ಮೂಲಕ ಆಯ್ದ ನಗರಗಳಲ್ಲಿ ಟ್ಯಾಕ್ಸಿ ಸೇವೆ ನೀಡಲು ಇಚ್ಚಿಸುವವರು ಅರ್ಜಿ ಸಲ್ಲಿಸುವುದು.

(ಇ) ವಯಸ್ಸು ಕನಿಷ್ಠ 21 ವರ್ಷಗಳು, ಗರಿಷ್ಠ 50 ವರ್ಷಗಳು

(ಈ) ಲಘು/ಭಾರಿ ವಾಹನ ಚಾಲನಾ ಪರವಾನಗಿ ಹೊಂದಿರಬೇಕು.

(ಉ) ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ರೂ.5.00 ಲಕ್ಷಗಳ ಮಿತಿಯೊಳಗಿರತಕ್ಕದ್ದು.

(ಊ) ಕಳೆದ 3 ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ನಿಗಮಗಳಿಂದ ವಿವಿಧ ಯೋಜನೆಗಳಡಿಯಲ್ಲಿ ರೂ.1.00 ಲಕ್ಷಕ್ಕಿಂತ ಮೇಲ್ಪಟ್ಟ ಸಹಾಯಧನ/ಸಾಲ ಪಡೆದವರು ಈ ಯೋಜನೆ ಅಡಿ ಸೌಲಭ್ಯ ಪಡೆಯಲು ಅರ್ಹರಲ್ಲ.

(ಋ) ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿ ಟ್ಯಾಕ್ಸಿ ಯೋಜನೆ ಅಡಿ ಸೌಲಭ್ಯ ಪಡೆದವರು ಈ ಯೋಜನೆ ಅಡಿ ಸೌಲಭ್ಯ ಪಡೆಯಲು ಅರ್ಹರಲ್ಲ.

(4) ಸಹಾಯಧನ/ಸಾಲ:-

(ಅ) ಈ ಯೋಜನೆ ಅಡಿ ಸರ್ಕಾರದಿಂದ ಆಯ್ಕೆಯಾದ ಅರ್ಹ ಫಲಾನುಭವಿಗಳಿಗೆ ಘಟಕ ವೆಚ್ಚದಲ್ಲಿ ಶೇ.50% ಅಥವಾ ಗರಿಷ್ಠ ರೂ.5.00 ಲಕ್ಷಗಳವರೆಗೆ ಸಹಾಯಧನ ನೀಡಲಾಗುವುದು.

(ಆ) ಘಟಕ ವೆಚ್ಚದ ಉಳಿದ ಮೊತ್ತವನ್ನು ಬ್ಯಾಂಕು/ಹಣಕಾಸು ಸಂಸ್ಥೆ ಅಥವಾ ಫಲಾನುಭವಿಗಳಿಂದ ಭರಿಸತಕ್ಕದ್ದು.

(ಇ) ಆಯ್ಕೆಯಾದ ಫಲಾನುಭವಿಗಳು ಸಾಲ ಪಡೆಯುವ ಸಲುವಾಗಿ ಮತ್ತು ನಿಗಮಗಳಿಂದ ಸಹಾಯಧನ ಬಿಡುಗಡೆ ಮಾಡುವ ಬಗ್ಗೆ ಈಗಾಗಲೇ ಜಾರಿಯಲ್ಲಿರುವ ವಿಧಾನಗಳನ್ನು ಅನುಸರಿಸುವುದು.

(5) ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ:-

(ಅ) ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಕರೆದು ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲಿಸಿ ಈ ಕೆಳಕಂಡ ಮಾನದಂಡಗಳ ಆಧಾರದ ಮೇಲೆ ಫಲಾನುಭವಿಗಳನ್ನು ಆಯ್ಕೆ ಮಾಡುವುದು.

(i) ಟ್ಯಾಕ್ಸಿ ಚಾಲನೆಯಲ್ಲಿ ಅನುಭವ ಹೊಂದಿರುವ ಅಭ್ಯರ್ಥಿಗಳಿಗೆ ಪ್ರತಿ ವರ್ಷ ಅನುಭವಕ್ಕೆ 2 ಅಂಕಗಳನ್ನು ನೀಡಿ, ಅನುಭವದ ಮೇಲೆ ಹೆಚ್ಚಿನ ಅಂಕಗಳನ್ನು ಪಡೆದವರನ್ನು ಆಯ್ಕೆ ಮಾಡುವುದು (ಪ್ರಾದೇಶಿಕ ಸಾರಿಗೆ ಅಧಿಕಾರಿ (ಆರ್.ಟಿ.ಒ) ಗಳಿಂದ ಲೈಸೆನ್ಸ್ ಪಡೆದ ದಿನಾಂಕದಿಂದ ಅನುಭವವನ್ನು ಪರಿಗಣಿಸುವುದು). ಆದರೆ, ಬ್ಯಾಡ್ಜ್ ಹೊಂದಿರುವವರಿಗೆ ಆದ್ಯತೆಯನ್ನು ನೀಡುವುದು.

(ii) ಒಂದು ವೇಳೆ ಒಬ್ಬರಿಗಿಂತ ಮೇಲ್ಪಟ್ಟು ಫಲಾನುಭವಿಗಳು ಸಮಾನ ಅಂಕಗಳನ್ನು ಪಡೆದಲ್ಲಿ, ವಯಸ್ಸಿನ ಹಿರಿತನದ ಮೇಲೆ ಆಯ್ಕೆ ಮಾಡುವುದು.

(iii) ನಿಗದಿಪಡಿಸಿದ ಗುರಿಯಲ್ಲಿ ಕನಿಷ್ಠ ಶೇ.10 ರಷ್ಟನ್ನು ಮಹಿಳಾ ಅಭ್ಯರ್ಥಿಗಳಿಗೆ ಕಾಯ್ದಿರಿಸುವುದು. ಒಂದು ವೇಳೆ ಮಹಿಳಾ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಪುರುಷ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದು.

(iv) ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಅಂತರ್‌ಜಾತಿ ವಿವಾಹವಾಗಿದ್ದು, ನೋಂದಣಿ ಮಾಡಿಕೊಂಡಿರುವವರಿಗೆ ಆದ್ಯತೆ ನೀಡಲಾಗುವುದು.

(v) ಉಬರ್/ ಓಲಾ ಇತರೆ ಸಂಸ್ಥೆಗಳು ಕಾರ್ಯ ನಿರ್ವಹಿಸುತ್ತಿರುವ ನಗರಗಳ ನಿವಾಸಿಗಳು ಅರ್ಹರಿದ್ದಲ್ಲಿ, ಅಂತಹವರಿಗೆ ನಿಗಧಿಪಡಿಸಿದ ಗುರಿಯೊಳಗೆ ಆದ್ಯತೆ ನೀಡುವುದು. ಗುರಿಯಂತೆ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಕ್ಕ ಪಕ್ಕದ ಜಿಲ್ಲೆಗಳ ಅಭ್ಯರ್ಥಿಗಳನ್ನು ಪರಿಗಣಿಸುವುದು.

(6) ಇತರ ಷರತ್ತುಗಳು:

(i) ಆಯ್ಕೆಯಾದ ಫಲಾನುಭವಿಗಳಿಗೆ ಓಲಾ/ಉಬರ್ ಮತ್ತು ಇತರೆ ಸಂಸ್ಥೆಗಳ ಫ್ಲಾಟ್‌ಫಾರಂದಲ್ಲಿ ಅಗತ್ಯ ತರಬೇತಿ ನೀಡಲು ಆಯಾ ನಿಗಮಗಳಿಂದ ವ್ಯವಸ್ಥೆ ಮಾಡುವುದು.

(ii) ಯಶಸ್ವಿಯಾಗಿ ತರಬೇತಿ ಬಗ್ಗೆ ದೃಢೀಕರಣ ಪತ್ರ ಪಡೆದ ನಂತರವೇ ಅಂತಿಮ ಮಂಜೂರಾತಿ ಪತ್ರವನ್ನು ನೀಡಿ ಸಹಾಯ ಧನವನ್ನು ನೀಡುವುದು.

(iii) ಆಯ್ಕೆಯಾದ ಅಭ್ಯರ್ಥಿಗಳು ಕನಿಷ್ಠ ಒಂದು ವರ್ಷದ ಅವಧಿಗೆ ಕಡ್ಡಾಯವಾಗಿ ಓಲಾ/ಉಬರ್ ಇತರೆ ಸಂಸ್ಥೆಗಳ ಫ್ಲಾಟ್‌ಫಾರಂಗಳ ಮೂಲಕ ಸೇವೆ ಸಲ್ಲಿಸತಕ್ಕದ್ದು.

(iv) ಫಲಾನುಭವಿಗಳು ನಿಗಮಗಳಿಂದ ಪಡೆದಿರುವ ಟ್ಯಾಕ್ಸಿಗಳನ್ನು ಮೂರು ವರ್ಷಗಳೊಳಗೆ ಪರಭಾರೆ ಮಾಡತಕ್ಕದ್ದಲ್ಲ.

ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ, ವ್ಯವಸ್ಥಾಪಕ ನಿರ್ದೇಶಕರುಗಳು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ಭೋವಿ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ನಿಯಮಿತ, ಇವರು ಮೇಲ್ಕಂಡ ಮಾನದಂಡಗಳಂತೆ ಅರ್ಹ ಫಲಾನುಭವಿಗಳ ಪಟ್ಟಿಯನ್ನು ತಯಾರಿಸಿ ಆಯ್ಕೆಯನ್ನು ಅಂತಿಮಗೊಳಿಸಿ ಯೋಜನೆಯನ್ನು ಅನುಷ್ಠಾನಗೊಳಿಸುವುದು.

ಪರಿಶಿಷ್ಟ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ ಇವರು ಮೇಲ್ಕಂಡ ಮಾನದಂಡಗಳಂತೆ ಅರ್ಹ ಫಲಾನುಭವಿಗಳ ಪಟ್ಟಿಯನ್ನು ತಯಾರಿಸಿ ಆಯ್ಕೆಯನ್ನು ಅಂತಿಮಗೊಳಿಸಿ ಯೋಜನೆಯನ್ನು ಅನುಷ್ಠಾನಗೊಳಿಸುವುದು.

ಸಫಾಯಿ ಕರ್ಮಚಾರಿಗಳು ಅರ್ಜಿ ಸಲ್ಲಿಸಿ ಅರ್ಹತೆ ಹೊಂದಿದ್ದಲ್ಲಿ ಅಂತಹವರಿಗೆ ಕರ್ನಾಟಕ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮದಿಂದ ಈ ಯೋಜನೆಯಡಿ ಸಹಾಯಧನ ನೀಡಲಾಗುವುದು.

ಮೇಲ್ಕಂಡ ಯೋಜನೆಗೆ ಪ್ರಸ್ತಾಪಿಸಿದ ವೆಚ್ಚವನ್ನು 2018-19ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಲೆಕ್ಕ ಶೀರ್ಷಿಕೆ 2225-01-796-0-02 (ವಿವಿಧ ಅಭಿವೃದ್ಧಿ ಯೋಜನೆಯಡಿ) ಹಾಗೂ 4225-01-796-0-01 (ವಿವಿಧ ಅಭಿವೃದ್ಧಿ ಯೋಜನೆ) ಒದಗಿಸಿದ ಅನುದಾನದಿಂದ ಭರಿಸುವುದು. ಅದೇ ರೀತಿ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಲೆಕ್ಕ ಶೀರ್ಷಿಕೆ 2225-02-794-0-05 ( ವಿವಿಧ ಅಭಿವೃದ್ಧಿ ಯೋಜನೆಯಡಿ) ಹಾಗೂ 4225-02-794-0-01 (ವಿವಿಧ ಅಭಿವೃದ್ಧಿ ಯೋಜನೆ) ಒದಗಿಸಿದ ಅನುದಾನದಿಂದ ಭರಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 678 ವೆಚ್ಚ-3/2018 ದಿನಾಂಕ: 12-10-2018ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಬಿ. ಪ್ರಕಾಶ್) 25/10/18
ಸರ್ಕಾರದ ಉಪ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

ಗೆ:-

1) ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು
4) ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ,
5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ,
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಭೋವಿ ಅಭಿವೃದ್ಧಿ ನಿಗಮ ನಿಯಮಿತ,
7) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ನಿಯಮಿತ
8) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ ನಿಯಮಿತ
9) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ
10) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿಗಳು:

1) ಸಮಾಜ ಕಲ್ಯಾಣ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು
3) ಸರ್ಕಾರದ ಜಂಟಿ/ಉಪ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ
4) ಸರ್ಕಾರದ ಅಧೀನ ಕಾರ್ಯದರ್ಶಿ-1, 2 & 3 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ



# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಭೂ ಒಡೆತನ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಭೂ ರಹಿತ ಕೃಷಿ ಕಾರ್ಮಿಕರಿಗೆ ಭೂ ಖರೀದಿಸಿ ಕೃಷಿ ಜಮೀನು ಒದಗಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ:ಸಕಇ 107 ಎಸ್ ಡಿಸಿ 2016, ದಿನಾಂಕ:28.05.2016.
2. ಸರ್ಕಾರದ ಪತ್ರದ ಸಂಖ್ಯೆ:ಸಕಇ 148 ಎಸ್ ಡಿಸಿ 2017, ದಿನಾಂಕ:20.04.2017
3. ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರ ಏಕ ಕಡತ ದಿನಾಂಕ:31.10.2019.

******

**ಪ್ರಸ್ತಾವನೆ:**

ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ ಮತ್ತು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತಗಳಿಂದ ಅನುಷ್ಠಾನಗೊಳಿಸುತ್ತಿರುವ ಭೂ ಒಡೆತನ ಯೋಜನೆಗೆ ಸಂಬಂಧಿಸಿದಂತೆ, ಸರ್ಕಾರದ ಕಂದಾಯ ಇಲಾಖೆ (ನೋಂದಣಿ ಮತ್ತು ಮುದ್ರಾಂಕ ಇಲಾಖೆ) ವಿವಿಧ ತರಹದ ಜಮೀನುಗಳಿಗೆ ಮಾರ್ಗಸೂಚಿ ಬೆಲೆಯನ್ನು ನಿರ್ಧರಿಸಿ ಕಾಲಕಾಲಕ್ಕೆ ಹೊರಡಿಸುವ ಅಧಿಸೂಚನೆಗಳನ್ನು ಅನುಸರಿಸಿ ಪ್ರತಿ ಎಕರೆಗೆ ಮಾರ್ಗಸೂಚಿ ದರ (guidance value) ದಂತೆ ಭೂ ಒಡೆತನ ಯೋಜನೆಯಡಿಯಲ್ಲಿ ಖರೀದಿಸಲು ಅನುಮೋದನೆ ನೀಡಿ ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಆದೇಶಿಸಿದೆ.

ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ ಮತ್ತು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತಗಳಿಂದ ಅನುಷ್ಠಾನಗೊಳಿಸುತ್ತಿರುವ ಭೂ ಒಡೆತನ ಯೋಜನೆಯಡಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಭೂರಹಿತ ಕೃಷಿ ಕಾರ್ಮಿಕರಿಗೆ ಜಮೀನು ಖರೀದಿ ಮಾಡಿ ವಿತರಿಸಲು ಜಾರಿಯಲ್ಲಿರುವ ಘಟಕ ವೆಚ್ಚ ರೂ.10.00 ರಿಂದ 15.00 ಲಕ್ಷಗಳವರೆಗೆ ಹೆಚ್ಚಿಸಿ ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಆದೇಶಿಸಿದೆ.

ಸದರಿ ಯೋಜನೆಯಡಿ ಫಲಾಪೇಕ್ಷಿಗಳಿಗೆ ಭೂಮಿ ಒದಗಿಸುವ ಸಂಬಂಧ ಪಡೆಯಬೇಕಾದ ವಿವಿಧ ದಾಖಲೆಗಳನ್ನು ಕ್ರೋಢೀಕರಿಸುವುದರಲ್ಲಿ ವಿಳಂಬವಾಗುತ್ತಿದ್ದು, ಇದರಿಂದಾಗಿ ಫಲಾಪೇಕ್ಷಿಗಳಿಗೆ ತ್ವರಿತವಾಗಿ ಯೋಜನೆಯ ಸೌಲಭ್ಯಗಳನ್ನು ನೀಡಲು ಸಾಧ್ಯವಾಗದ ಕಾರಣ, ಈ ಪ್ರಕ್ರಿಯೆಯನ್ನು ಸರಳೀಕರಣಗೊಳಿಸಿ ಸೂಕ್ತ ಆದೇಶ ಹೊರಡಿಸುವಂತೆ ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಕೋರಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 399 ಎಸ್ ಡಿಸಿ 2019, ಬೆಂಗಳೂರು, ದಿನಾಂಕ:11.06.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ವಿವಿಧ ನಿಗಮ/ಅಲೆಮಾರಿ ಕೋಶಗಳ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಭೂ ರಹಿತ ಕೃಷಿ ಕಾರ್ಮಿಕರಿಗೆ ಭೂ ಒಡೆತನ ಯೋಜನೆಯಡಿ ಭೂಮಿಯನ್ನು ಒದಗಿಸುವ ಸಂಬಂಧ ಪಡೆಯಬೇಕಾದ ವಿವಿಧ ದಾಖಲೆಗಳನ್ನು ಹಾಗೂ ಪ್ರಕ್ರಿಯೆಯನ್ನು ಸರಳೀಕರಣಗೊಳಿಸಿ ಈ ಕೆಳಕಂಡ ಮಾರ್ಗಸೂಚಿ / ನಿಬಂಧನೆಗಳನ್ನು ಅನುಸರಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲು ಆದೇಶಿಸಿದೆ.

**ಮಾರ್ಗಸೂಚಿ / ನಿಬಂಧನೆಗಳು**

1. ಜಿಲ್ಲಾ ವ್ಯವಸ್ಥಾಪಕರು ಪರಿಶಿಷ್ಟ ಜಾತಿ / ಪಂಗಡದ ಭೂ ರಹಿತ ಮಹಿಳಾ ಕೃಷಿ ಕಾರ್ಮಿಕರಿಂದ ಏಪ್ರಿಲ್ ಮಾಹೆಯಲ್ಲಿ ಅರ್ಜಿ ಸಲ್ಲಿಸಲು ಸಮಯ ನಿಗದಿಪಡಿಸಿ, ಅರ್ಜಿಗಳನ್ನು ಪತ್ರಿಕಾ ಪ್ರಕಟಣೆ ಮೂಲಕ ಆಹ್ವಾನಿಸುವುದು.
2. ಜಮೀನು ಮಾರಾಟ ಮಾಡಲು ಇಚ್ಛಿಸಿರುವ ಭೂ ಮಾಲೀಕರಿಂದಲೂ ಸಹ ಏಪ್ರಿಲ್ ಮಾಹೆಯಲ್ಲಿ ಪ್ರಸ್ತಾವನೆಗಳನ್ನು ಸಲ್ಲಿಸಲು ಪತ್ರಿಕಾ ಪ್ರಕಟಣೆ ಮೂಲಕ ವ್ಯಾಪಕ ಪ್ರಚಾರ ನೀಡುವುದು.
3. ಭೂ ಲಭ್ಯತೆ ಮತ್ತು ಬೇಡಿಕೆಗೆ ಅನುಗುಣವಾಗಿ ವರ್ಷದ ಪ್ರಾರಂಭದಲ್ಲಿ ವಿವಿಧ ನಿಗಮಗಳ ವ್ಯವಸ್ಥಾಪಕ ನಿರ್ದೇಶಕರುಗಳು ಆಯಾ ಜಿಲ್ಲೆಯ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ವ್ಯವಸ್ಥಾಪಕರ ಜಂಟಿ ಖಾತೆಗೆ ಅನುದಾನ ಬಿಡುಗಡೆ ಮಾಡುವುದು.

**4. ಅರ್ಜಿದಾರರು ಸಲ್ಲಿಸಬೇಕಾದ ದಾಖಲೆಗಳು (ನಿಗದಿತ ನಮೂನೆಯಲ್ಲಿ ವಿವರಗಳನ್ನು ಭರ್ತಿ ಮಾಡಿ ಅರ್ಜಿ ಮತ್ತು ಈ ಕೆಳಕಂಡ ದಾಖಲಾತಿಗಳನ್ನು ಲಗತ್ತಿಸಿ ನಿಗಮದ ಜಿಲ್ಲಾ ಕಛೇರಿಯಲ್ಲಿ/ ತಾಲ್ಲೂಕು ಅಭಿವೃದ್ಧಿ ಅಧಿಕಾರಿಗೆ ಸಲ್ಲಿಸುವುದು.)**

ಅ) ಜಾತಿ ಪ್ರಮಾಣ ಪತ್ರ (ತಹಸೀಲ್ದಾರರಿಂದ)
ಆ) ಆದಾಯ ಪ್ರಮಾಣ ಪತ್ರ (ತಹಸೀಲ್ದಾರರಿಂದ)
ಇ) ಭೂ ರಹಿತ ಕೃಷಿ ಕಾರ್ಮಿಕರ ಪತ್ರ (ತಹಸೀಲ್ದಾರರಿಂದ)
ಈ) ಆಧಾರ ಕಾರ್ಡ್ ಮತ್ತು ರೇಷನ್ ಕಾರ್ಡ್ (ಪಡಿತರ ಚೀಟಿ)

**5. ಭೂ ಮಾಲೀಕರು ನಮೂನೆ-1 ರ ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು.**

1. ಜಾತಿ ಪ್ರಮಾಣ ಪತ್ರ
2. ಭೂ ಮಾರಾಟ ಮಾಡಲು ಮುಚ್ಚಳಿಕೆ ಪತ್ರ (ಛಾಪಾ ಕಾಗದದಲ್ಲಿ ನೋಟರಿ ಮಾಡಿಸಿ ಸಲ್ಲಿಸತಕ್ಕದ್ದು.)
3. ಭೂ ಮಾಲೀಕರ ವಂಶಾವಳಿ (ಗ್ರಾಮ ಲೆಕ್ಕಾಧಿಕಾರಿಗಳಿಂದ ದೃಢೀಕರಿಸಿಕೊಂಡು ಸಲ್ಲಿಸತಕ್ಕದ್ದು.)
4. ಕುಟುಂಬ ಸದಸ್ಯರ ನಿರಾಕ್ಷೇಪಣಾ ಪತ್ರ (NOC) (ಛಾಪಾ ಕಾಗದದಲ್ಲಿ ವಂಶಾವಳಿಯಲ್ಲಿರುವ ಸದಸ್ಯರು ನೋಟರಿ ಮಾಡಿಸಿ ಸಲ್ಲಿಸತಕ್ಕದ್ದು.)
5. ಇತ್ತೀಚಿನ ಪಹಣಿ ಪತ್ರಿಕೆ ಮತ್ತು ಹಕ್ಕು ಬದಲಾವಣೆ ಪ್ರತಿ. (ಮ್ಯುಟೇಷನ್ ಪ್ರತಿ)
6. ಕಳೆದ 13 ವರ್ಷಗಳ ಇ.ಸಿ. (ಋಣಭಾರ ರಾಹಿತ್ಯ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.)

6. ಜಿಲ್ಲಾ ವ್ಯವಸ್ಥಾಪಕರು ಕೈಗೊಳ್ಳಬೇಕಾದ ಕ್ರಮಗಳು.

1. ಅರ್ಜಿದಾರರಿಂದ ಸ್ವೀಕೃತವಾಗುವ ಅರ್ಜಿಗಳು ಮತ್ತು ಭೂ ಲಭ್ಯತೆಗನುಗುಣವಾಗಿ ಅಗತ್ಯವಿರುವ ಅನುದಾನವನ್ನು ಬಿಡುಗಡೆ ಮಾಡಲು ಪ್ರಸ್ತಾವನೆಯನ್ನು ಕೇಂದ್ರ ಕಚೇರಿಗೆ ಸಲ್ಲಿಸುವುದು.
2. ಅರ್ಜಿ ಬಂದ ತಕ್ಷಣ ಜಿಲ್ಲಾ ಕಛೇರಿಯಿಂದ ಭೂ ಮಾಲೀಕರಿಗೆ ಕ್ರಮ ಸಂಖ್ಯೆ: 5 ರಲ್ಲಿ ನಮೂದಿಸಿದ ದಾಖಲಾತಿಗಳನ್ನು ಸಲ್ಲಿಸಲು ಲಿಖಿತವಾಗಿ ತಿಳಿಸುವುದು ಮತ್ತು 45 ದಿವಸಗಳಲ್ಲಿ ದಾಖಲಾತಿಗಳನ್ನು ಸಲ್ಲಿಸದೇ ಇದ್ದಲ್ಲಿ ಸೂಕ್ತ ಹಿಂಬರಹದೊಂದಿಗೆ ಪ್ರಕರಣವನ್ನು ಮುಕ್ತಾಯಗೊಳಿಸುವುದು.
3. ಫಲಾಪೇಕ್ಷಿಯು ಕ್ರಮ ಸಂಖ್ಯೆ (4) ರಲ್ಲಿ ನಮೂದಿಸಿದ ದಾಖಲೆಗಳನ್ನು ಅರ್ಜಿಯೊಂದಿಗೆ ಲಗತ್ತಿಸದೇ ಇದ್ದಲ್ಲಿ ಅಂತಹ ಅರ್ಜಿಯನ್ನು ಸೂಕ್ತ ತಿಳುವಳಿಕೆಯ ಹಿಂಬರಹದೊಂದಿಗೆ ಹಿಂದಿರುಗಿಸುವುದು.
4. ಅರ್ಜಿದಾರರು (ಫಲಾಪೇಕ್ಷಿ) ಮತ್ತು ಅವರ ಕುಟುಂಬದ ಸದಸ್ಯರು ಕಳೆದ 05 ವರ್ಷಗಳಲ್ಲಿ ರೂ.1.00 ಲಕ್ಷಕ್ಕಿಂತ ಮೇಲ್ಪಟ್ಟು ನಿಗಮದಿಂದ ಸಾಲ / ಸಹಾಯಧನ ಪಡೆದಿದ್ದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸತಕ್ಕದ್ದಲ್ಲ.
5. ಫಲಾಪೇಕ್ಷಿಗಳು ಭೂಮಿಯನ್ನು ಕೋರಿ ಅರ್ಜಿಗಳನ್ನು ಸಲ್ಲಿಸಲು ಮತ್ತು ಜಮೀನು ಮಾರಾಟ ಮಾಡಲು ಭೂ ಮಾಲೀಕರು ಅರ್ಜಿಗಳನ್ನು ಸಲ್ಲಿಸಲು ಗ್ರಾಮ ಸಭೆಯ ಅನುಮೋದನೆ ಅಗತ್ಯವಿರುವುದಿಲ್ಲ.
6. ಅರ್ಜಿದಾರರು ಸಲ್ಲಿಸುವ ದಾಖಲೆಗಳನ್ನು ಪರಿಶೀಲನೆ ಮಾಡಿ ನಮೂನೆ-2 ರಲ್ಲಿ ವರದಿ ನೀಡುವಂತೆ ತಹಶೀಲ್ದಾರರನ್ನು ಕೋರುವುದು.
7. ತಹಶೀಲ್ದಾರರು ಜಿಲ್ಲಾ ವ್ಯವಸ್ಥಾಪಕರು/ ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳು ಸಲ್ಲಿಸುವ ದಾಖಲೆಗಳನ್ನು ಪರಿಶೀಲಿಸಿ ನಮೂನೆ-2 ರಲ್ಲಿ 15 ದಿನಗಳೊಳಗಾಗಿ ವರದಿಯನ್ನು ನೀಡುವುದು.
8. ಜಿಲ್ಲಾ ವ್ಯವಸ್ಥಾಪಕರು ಮತ್ತು ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳು ಅರ್ಜಿ ಸ್ವೀಕರಿಸಿದ 30 ದಿನಗಳೊಳಗಾಗಿ ಸ್ಥಳ ಪರಿಶೀಲನೆ ಮಾಡತಕ್ಕದ್ದು.
9. ಸ್ಥಳ ಪರಿಶೀಲನಾ ವರದಿಯನ್ನು ನಮೂನೆ-3 ರಲ್ಲಿ ನಮೂದಿಸತಕ್ಕದ್ದು ಮತ್ತು ಸ್ಥಳ ಪರಿಶೀಲನಾ ಸಮಯದಲ್ಲಿ ಭೂ ಮಾಲೀಕರು ಮತ್ತು ಫಲಾನುಭವಿಗಳು ಇರುವ ಅಕ್ಷಾಂಶ ಮತ್ತು ರೇಖಾಂಶ ಸಹಿತ ಛಾಯಾ ಚಿತ್ರ ಹಾಗೂ ವಿಡಿಯೋವನ್ನು ಮಾಡತಕ್ಕದ್ದು.
10. ಜಿಲ್ಲಾ ವ್ಯವಸ್ಥಾಪಕರು, ಕಂದಾಯ ಇಲಾಖೆಯಿಂದ ಪ್ರಕಟಿಸಿರುವ ಮಾರ್ಗಸೂಚಿ ಬೆಲೆಯನ್ನು(kar.igr.nic) (https://www.karnataka.gov.in/karigr/ Pages/Home.aspx) ಜಾಲತಾಣ (website) ನಲ್ಲಿ ಪಡೆದು, ಸ್ಥಳ ಪರಿಶೀಲನಾ ವರದಿ ಮತ್ತು ಇತರೆ ದಾಖಲಾತಿಗಳ ಸಹಿತ ಪ್ರಸ್ತಾವನೆಯನ್ನು ಚೆಕ್ ಲಿಸ್ಟ್ ನೊಂದಿಗೆ 30 ದಿನಗಳೊಳಗಾಗಿ ಜಿಲ್ಲಾಧಿಕಾರಿಗಳ ಕಛೇರಿಗೆ ಸಲ್ಲಿಸುವುದು.
11. ಜಿಲ್ಲಾ ವ್ಯವಸ್ಥಾಪಕರು, ಭೂ ಮಾಲೀಕರು ಅರ್ಜಿಯೊಂದಿಗೆ ಸಲ್ಲಿಸಿದ ಛಾಪಾ ಕಾಗದದಲ್ಲಿ ಮುಚ್ಚಳಿಕೆ ಪತ್ರ ಸ್ವೀಕರಿಸಿದ ದಿನಾಂಕವನ್ನು ಜೇಷ್ಠತೆ ಎಂದು ಪರಿಗಣಿಸಿ ಪ್ರಸ್ತಾವನೆಗಳನ್ನು ಜಿಲ್ಲಾಧಿಕಾರಿಗಳ ಕಛೇರಿಗೆ ಸಲ್ಲಿಸುವುದು.
12. ಜಿಲ್ಲಾಧಿಕಾರಿ ಕಛೇರಿಗೆ ಪ್ರಸ್ತಾವನೆ ಸಲ್ಲಿಸುವ ಮುನ್ನಾ ಎಲ್ಲಾ ದಾಖಲೆಗಳನ್ನು ಮೂಲ ಪ್ರತಿಗಳೊಂದಿಗೆ ತಾಳೆಮಾಡಿ ದೃಢೀಕರಿಸಿಕೊಳ್ಳತಕ್ಕದ್ದು.

7. **ಜಿಲ್ಲಾಧಿಕಾರಿ ಕಛೇರಿಯಲ್ಲಿ ಪ್ರಸ್ತಾವನೆಗಳನ್ನು ಸ್ವೀಕರಿಸಿದ ನಂತ ತೆಗೆದುಕೊಳ್ಳಬೇಕಾದ ಕ್ರಮಗಳು.**

1. ಸ್ವೀಕರಿಸಿದ ಪ್ರಸ್ತಾವನೆಗಳನ್ನು ಒಂದು ವಹಿಯಲ್ಲಿ ದಾಖಲಿಸಿ ಅದರ ಜೇಷ್ಠತೆ ಅನುಸಾರ ಪರಿಶೀಲಿಸುವುದು.
2. ಒಂದು ವೇಳೆ ಪ್ರಸ್ತಾವನೆಯಲ್ಲಿ ಏನಾದರೂ ದಾಖಲಾತಿಗಳ ಕೊರತೆ ಇದ್ದಲ್ಲಿ ತಕ್ಷಣವೇ ಅಂತಹ ದಾಖಲಾತಿಗಳನ್ನು ಜಿಲ್ಲಾ ವ್ಯವಸ್ಥಾಪಕರಿಂದ ಪಡೆಯತಕ್ಕದ್ದು.
3. ಜಿಲ್ಲಾಧಿಕಾರಿಗಳು ಇಚ್ಛಿಸಿದ್ದಲ್ಲಿ ಅವರು ಅಥವಾ ಉಪ ವಿಭಾಗಾಧಿಕಾರಿಗಳು ಜಿಲ್ಲಾ ಸಮಿತಿಯ ಸಭೆಗೆ ಮುನ್ನಾ ಸ್ಥಳ ಪರಿಶೀಲನೆ ಮಾಡಬಹುದು. (ಈ ಪ್ರಕ್ರಿಯೆ ಒಟ್ಟಾರೆ ಕಾರ್ಯಕ್ರಮದ ಅನುಷ್ಠಾನವನ್ನು ವಿಳಂಬಗೊಳಿಸದಂತೆ ಎಚ್ಚರವಹಿಸುವುದು.)
4. ಜಿಲ್ಲಾ ವ್ಯವಸ್ಥಾಪಕರಿಂದ ಸ್ವೀಕೃತವಾಗುವ ಪ್ರಸ್ತಾವನೆಗಳಿಗೆ ದರ ನಿಗದಿಪಡಿಸಲು ಭೂ ಮೌಲ್ಯ ನಿರ್ಧಾರಣ ಸಮಿತಿಯ ದಿನಾಂಕವನ್ನು ನಿಗದಿಪಡಿಸುವುದು.
5. ಜಿಲ್ಲಾಧಿಕಾರಿಗಳು ಕಂದಾಯ ಇಲಾಖೆಯ ಮಾರ್ಗಸೂಚಿ ಬೆಲೆಯನ್ನು ಒಂದು ಮಾನದಂಡವನ್ನಾಗಿ ಪರಿಗಣಿಸಿ ಜಮೀನಿನ ಫಲವತ್ತತೆ, ನೀರಾವರಿ ಸೌಕರ್ಯ ಇತ್ಯಾದಿಗಳ ಬಗ್ಗೆ ಪರಿಶೀಲಿಸಿ ಸೂಕ್ತ ಸಮರ್ಥನೆಯೊಂದಿಗೆ ದರ ನಿಗದಿಪಡಿಸುವುದು. ಯಾವುದೇ ಕಾರಣಕ್ಕೂ ಮಾರ್ಗಸೂಚಿ ಬೆಲೆಯ ಮೂರುಪಟ್ಟು ದರವನ್ನು ಯಾಂತ್ರಿಕವಾಗಿ ನಿಗದಿಪಡಿಸತಕ್ಕದಲ್ಲ. ದರ ನಿಗದಿಪಡಿಸುವ ಮುನ್ನಾ ಸಂಬಂಧಿಸಿದ ಭೂ ಮಾಲೀಕರೊಂದಿಗೆ ಫಲಾಪೇಕ್ಷಿಗಳ ಸಮ್ಮುಖದಲ್ಲಿ ದರ ಸಂಧಾನ ನಡೆಸುವುದು.
6. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಜಿಲ್ಲಾ ಸಮಿತಿಯಲ್ಲಿ ದರ ನಿಗದಿಪಡಿಸಿದ ಸಭೆಯ ದಿನಾಂಕವನ್ನು ಜೇಷ್ಠತೆಯನ್ನಾಗಿ ಪರಿಗಣಿಸಿ ಯಾದಿಯನ್ನು ತಯಾರಿಸಿ ಕೇಂದ್ರ ಕಛೇರಿಗೆ ಮಂಜೂರಾತಿಗೆ ಸಲ್ಲಿಸುವುದು.
7. ವ್ಯವಸ್ಥಾಪಕ ನಿರ್ದೇಶಕರು, ಯಾದಿಯನ್ನು ಪರಿಶೀಲಿಸಿ ಮಂಜೂರಾತಿ ನೀಡಿ 15 ದಿನಗಳೊಳಗಾಗಿ ಜಿಲ್ಲಾಧಿಕಾರಿಗಳಿಗೆ ಹಿಂತಿರುಗಿಸುವುದು.
8. ಕೇಂದ್ರ ಕಛೇರಿಯಿಂದ ಮಂಜೂರಾತಿ ದೊರೆತ ನಂತರ ನಮೂನೆ-3 ರಲ್ಲಿ ಜಿಲ್ಲಾಧಿಕಾರಿಗಳ ಕಛೇರಿಯಿಂದಲೇ ಮಂಜೂರಾತಿ ಆದೇಶವನ್ನು 15 ದಿನಗಳೊಳಗಾಗಿ ಹೊರಡಿಸುವುದು ಮತ್ತು ಈ ಆದೇಶವನ್ನು ಜಿಲ್ಲಾ ವ್ಯವಸ್ಥಾಪಕರುಗಳಿಗೆ, ಭೂ ಮಾಲೀಕರಿಗೆ ಮತ್ತು ಫಲಾಪೇಕ್ಷಿಗಳಿಗೆ ನೀಡುವುದು.

8. **ಮಂಜೂರಾತಿ ನಂತರ ಜಿಲ್ಲಾ ವ್ಯವಸ್ಥಾಪಕರು ತೆಗೆದುಕೊಳ್ಳಬೇಕಾದ ಕ್ರಮಗಳು**

1) ಜಿಲ್ಲಾ ವ್ಯವಸ್ಥಾಪಕರು ಜಿಲ್ಲಾಧಿಕಾರಿಗಳ ಕಛೇರಿಯಿಂದ ಜಮೀನು ಖರೀದಿಗೆ ಮಂಜೂರಾತಿ ದೊರೆತ ನಂತರ 11ಇ ನಕಾಶೆ ಮಾಡಿಸತಕ್ಕದ್ದು.
2) ಫಲಾನುಭವಿಗೆ ಮಂಜೂರು ಮಾಡುವ ಸಾಲದ ಮೊತ್ತಕ್ಕೆ ಅಗತ್ಯವಿರುವ ಪ್ರೋ-ನೋಟ್, ಕನ್ಸಿಡರೇಷನ್- ರಶೀದಿ, ಸಾಲದ ಕರಾರು ಪತ್ರ ಹಾಗೂ ಇತರೆ ಪೂರಕ ದಾಖಲಾತಿಗಳನ್ನು ಪಡೆಯತಕ್ಕದ್ದು ಮತ್ತು ಸಾಲ ನೀಡಿರುವ ಬಗ್ಗೆ ವಿವರಗಳನ್ನು ನಿಗದಿತ ರಿಜಿಸ್ಟರ್‌ನಲ್ಲಿ ನಮೂದಿಸತಕ್ಕದ್ದು.
3) ಫಲಾನುಭವಿಯ ಹೆಸರಿಗೆ ಜಮೀನು ನೋಂದಣಿ ಮಾಡಿಸುವ ಮುನ್ನಾ ಭೂ ಮಾಲೀಕರು ಸ್ಥಳೀಯ ಬ್ಯಾಂಕುಗಳಿಂದ ಸಾಲ ಪಡೆದಿದ್ದಲ್ಲಿ ಬೇಬಾಕಿ ಪತ್ರ (NDC- NO DUE CERTIFICATE) ಪಡೆದು, ಅದರಂತೆ ಸಾಲದ ಮೊತ್ತವನ್ನು ನೇರವಾಗಿ ಹಣಕಾಸು ಸಂಸ್ಥೆಗೆ ನೀಡುವುದು. ತದನಂತರ ಜಮೀನಿನ ಮೇಲೆ ಬೋಜ / ಅಡಮಾನವು ಪಹಣಿ / ECಯಲ್ಲಿ ದಾಖಲಾಗಿದ್ದಲ್ಲಿ ತೆರವುಗೊಳಿಸಿ ಖುಲಾಸೆ ಪತ್ರ ಪಡೆದು ಉಳಿದ ಮೊತ್ತವನ್ನು ಭೂ ಮಾಲೀಕರಿಗೆ ಪಾವತಿಸುವುದು.
4) ಮಂಜೂರಾತಿಯಂತೆ ನೊಂದಣಿಯಾದ ನಂತರ ಪ್ರಥಮ ಹಂತದಲ್ಲಿ ಶೇ.80 ರಷ್ಟು ಅನುದಾನವನ್ನು ಭೂ ಮಾಲೀಕರಿಗೆ ಜಿಲ್ಲಾಧಿಕಾರಿಗಳು ಬಿಡುಗಡೆ ಮಾಡುವುದು.
5) ಖರೀದಿ ಪತ್ರವನ್ನು ಉಪನೋಂದಣಾಧಿಕಾರಿಗಳಿಂದ ಪಡೆದು, ಫಲಾನುಭವಿಯ ಹೆಸರು ಪಹಣಿ ಪತ್ರಿಕೆಯಲ್ಲಿ ನಮೂದಿಸಲು ಕ್ರಮವಹಿಸುವುದು.

6) ನಿಗಮದ ಹೆಸರಿಗೆ ಜಮೀನು ಅಡಮಾನ ಮಾಡಿಕೊಳ್ಳತಕ್ಕದ್ದು ಮತ್ತು ಆರ್.ಟಿ.ಸಿ. / ಉತಾರೆ ಪಹಣಿಯ ಕಲಂ-11 ರಲ್ಲಿ ಪರಭಾರೆ ನಿಷೇಧಿಸಿದೆ ಎಂದು ದಾಖಲಿಸುವುದು.

7) ಭೂ ಮಾಲೀಕರಿಂದ ಫಲಾನುಭವಿಗೆ ಜಮೀನು ಹಸ್ತಾಂತರಿಸಿದ ಸ್ವಾಧೀನ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. (ನಮೂನೆ-5)

8) ಜಿಲ್ಲಾಧಿಕಾರಿ ಕಛೇರಿಯಿಂದ ಶೇ.20 ರಷ್ಟು ಅನುದಾನವನ್ನು ಬಿಡುಗಡೆ ಮಾಡುವ ಮುಂಚೆ ಮೇಲ್ಕಂಡ ಕ್ರಮ ಸಂಖ್ಯೆ 5 ರಿಂದ 7 ರವರೆಗಿನ ಮೂಲ ದಾಖಲಾತಿಗಳ ಪ್ರತಿಗಳನ್ನು ಜಿಲ್ಲಾಧಿಕಾರಿ ಕಛೇರಿಗೆ ಸಲ್ಲಿಸತಕ್ಕದ್ದು. (ನೋಂದಣಿ ಆದ ನಂತರ ಅಂದಾಜು 2 ತಿಂಗಳ ಸಮಯದಲ್ಲಿ ಎಲ್ಲಾ ಪ್ರಕ್ರಿಯೆಗಳನ್ನು ಪೂರ್ಣಗೊಳಿಸತಕ್ಕದ್ದು.)

9) ಮೇಲ್ಕಂಡ ಪ್ರಕ್ರಿಯೆಗಳು ಪೂರ್ಣಗೊಂಡ ನಂತರ ಉಳಿದ ಶೇ.20 ರಷ್ಟು ಅನುದಾನವನ್ನು ಜಿಲ್ಲಾಧಿಕಾರಿ ಕಛೇರಿಯಿಂದ ಭೂ ಮಾಲೀಕರಿಗೆ ಬಿಡುಗಡೆ ಮಾಡುವುದು.

10) ಜಮೀನು ನೋಂದಣಿಯಾದ ನಂತರ ಜಮೀನು ಸರಹದ್ದನ್ನು ಸರ್ವೆಯರ್ ಮೂಲಕ ಗುರುತು ಹಾಕಿಸಿ, ಫಲಾನುಭವಿಗಳ ಸ್ವಾಧೀನಕ್ಕೆ ನೀಡತಕ್ಕದ್ದು.

11) ಜಮೀನು ನೋಂದಣಿಗೊಂಡ 45 ದಿವಸದೊಳಗಾಗಿ ಜಮೀನಿನ ಖಾತೆಯನ್ನು ಫಲಾನುಭವಿಯ ಹೆಸರಿಗೆ ವರ್ಗಾಯಿಸಲು ಮತ್ತು ಜಮೀನು ನಿಗಮಕ್ಕೆ ಆಧಾರಮಾಡಿಸಿ ಕಲಂ 11 ರಲ್ಲಿ ಪರಭಾರೆ ಮತ್ತು ಮಾರಾಟ ನಿಷೇದಿಸಿದೆ ಎಂದು ಪಹಣಿಯಲ್ಲಿ ನಮೂದಿಸಲ್ಪಡುವ ಕುರಿತು ಅಗತ್ಯ ಕ್ರಮ ಕೈಗೊಳ್ಳಬೇಕು ಮತ್ತು ನೋಂದಣಿ ನಂತರ ಎರಡನೇ ಇ.ಸಿಯನ್ನು ಪಡೆದು ಕಡತದಲ್ಲಿ ಇಟ್ಟುಕೊಳ್ಳತಕ್ಕದ್ದು;

ಅರ್ಜಿದಾರರ ಅರ್ಹತೆ, ಘಟಕ ವೆಚ್ಚ, ವಾಸಸ್ಥಳದಿಂದ ಜಮೀನಿನ ಅಂತರ, ಇತ್ಯಾದಿಗಳಿಗೆ ಸಂಬಂಧಿಸಿದಂತೆ ಈಗಾಗಲೇ ಜಾರಿಯಲ್ಲಿರುವ ಮಾರ್ಗಸೂಚಿ / ನಿಬಂಧನೆಗಳನ್ನು ಯಥಾವತ್ತಾಗಿ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶಂಭುಲಿಂಗಯ್ಯ)
ಸರ್ಕಾರದ ಉಪ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ,**

1. ಮಹಾಲೇಖಪಾಲರು, (ಲೆಕ್ಕಪತ್ರ/ಲೆಕ್ಕ ಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಬೆಂಗಳೂರು.
5. ವಿಶೇಷಾಧಿಕಾರಿ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಭೋವಿ ಅಭಿವೃದ್ಧಿ ನಿಗಮ, ಬೆಂಗಳೂರು.
7. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
8. ಎಲ್ಲಾ ಜಿಲ್ಲೆಗಳ ಉಪ / ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
9. ಎಲ್ಲಾ ಜಿಲ್ಲೆಗಳ ಜಿಲ್ಲಾ ವ್ಯವಸ್ಥಾಪಕರು, ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ.
10. ಎಲ್ಲಾ ಜಿಲ್ಲೆಗಳ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ.
11. ಎಲ್ಲ ತಾಲ್ಲೂಕಿನ ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳು.
12. ಶಾಖಾ ರಕ್ಷಾ ಕಡತ.

**ಪ್ರತಿ ಮಾಹಿತಿಗಾಗಿ**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
2. ಸರ್ಕಾರದ ಉಪ ಕಾರ್ಯದರ್ಶಿ-1 ಮತ್ತು 2, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸಸೌಧ.



ಕರ್ನಾಟಕ ಸರ್ಕಾರ

ಸಂಖ್ಯೆ:ಸಕಇ 148 ಸ್ವೀಮರ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:30.06.2018.

## ಸುತ್ತೋಲೆ

ವಿಷಯ: ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿಗಮಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಸಕಇ 162 ಎಸ್‌ಡಿಸಿ 2015, ದಿನಾಂಕ: 09.09.2015.
2. ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ನಿಯಮಗಳು - 2017.
3. ಲೋಕಾಯುಕ್ತರ ಆದೇಶ ಸಂಖ್ಯೆ: ಸಿ.ಒ.ಎಂ.ಪಿ.ಟಿ./ ಎಲ್.ಒ.ಕೆ./ಬಿಸಿಡಿ/2724/2016, ದಿನಾಂಕ:30.08.2017.



******

ಸಮಾಜ ಕಲ್ಯಾಣ ಇಲಾಖೆಯಿಂದ ವಿವಿಧ ಯೋಜನೆಗಳ ಅಡಿಯಲ್ಲಿ ಫಲಾಪೇಕ್ಷಿಗಳನ್ನು ಆಯ್ಕೆ ಮಾಡುವಲ್ಲಿ ಅರ್ಹ ಅಭ್ಯರ್ಥಿಗಳಿಗೆ ಯೋಜನೆಗಳ ಪ್ರಯೋಜನ ಸಿಗುತ್ತಿಲ್ಲವೆಂದು ಮತ್ತು ಅನರ್ಹರನ್ನು ಕೂಡ ಆಯ್ಕೆ ಮಾಡಲಾಗುತ್ತಿದೆ ಎಂದು ಮಾನ್ಯ ಲೋಕಾಯುಕ್ತಕ್ಕೆ ದೂರುಗಳು ಬಂದಿರುವುದರಿಂದ ಮಾನ್ಯ ಲೋಕಾಯುಕ್ತರು ತಮ್ಮ ಆದೇಶ ಉಲ್ಲೇಖ (3)ರಲ್ಲಿ ಫಲಾಪೇಕ್ಷಿಗಳನ್ನು ಆಯ್ಕೆ ಮಾಡಲು ಈ ಕೆಳಕಂಡ ಮಾರ್ಗದರ್ಶನಗಳನ್ನು ನೀಡಿರುತ್ತಾರೆ:

1. ಅರ್ಜಿಗಳನ್ನು ಆಹ್ವಾನಿಸುವಾಗ ದಿನಾಂಕ ನಿಗದಿಪಡಿಸಿ ಸದರಿ ದಿನಾಂಕದ ಒಳಗೆ ಬಂದ ಅರ್ಜಿಗಳನ್ನು ಮಾತ್ರ ಪರಿಗಣಿಸತಕ್ಕದ್ದು. ನಿಗದಿಪಡಿಸಿದ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಬಾರದು ಮತ್ತು ಅವುಗಳನ್ನು ತಿರಸ್ಕರಿಸುವುದು.
2. ಬಂದಿರುವ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ತಾಲ್ಲೂಕು ಮಟ್ಟದ ಆಯ್ಕೆ ಸಮಿತಿ ಮುಂದೆ ಸಲ್ಲಿಸುವುದು. ಮತ್ತು ಅರ್ಹರಾಗಿದ್ದಲ್ಲಿ ಮಾತ್ರ ಆಯ್ಕೆ ಮಾಡುವುದು.
3. ಅರ್ಜಿದಾರರು ಒಂದು ಬಾರಿಗಿಂತ ಹೆಚ್ಚಾಗಿ ಎರಡು, ಮೂರು ಬಾರಿ ಅರ್ಜಿ ಸಲ್ಲಿಸಿದವರಿಗೆ ಅವರಿಗೆ ಮೊದಲನೇ ಆದ್ಯತೆ ನೀಡಿ ಆಯ್ಕೆ ಮಾಡುವುದು.
4. ಅರ್ಹ ಅಭ್ಯರ್ಥಿಗಳು ಹೆಚ್ಚಿಗೆ ಇದ್ದಲ್ಲಿ ಕಾಯ್ದಿರಿಸಿದ ಪಟ್ಟಿಯಲ್ಲಿ ಸೇರಿಸಿ, ಮುಂದಿನ ಆಯ್ಕೆಯಲ್ಲಿ ಆದ್ಯತೆ ನೀಡುವುದು.
5. ವಿಧಾನಸಭಾ ಕ್ಷೇತ್ರಕ್ಕೆ ನೀಡಿದ ಗುರಿಯನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿವಿಧ ಜಾತಿಗಳ ಜನಸಂಖ್ಯೆಯ ಆಧಾರದ ಮೇಲೆ ಆಯ್ಕೆ ಮಾಡುವುದು ಅಂದರೆ ಬಡವರಲ್ಲಿ ಅತಿ ಬಡವರನ್ನು ಆಯ್ಕೆ ಮಾಡುವುದು.
6. ಆಯ್ಕೆ ಸಮಿತಿಯ ಆಯ್ಕೆ ಸಮಿತಿ ಸಭೆಯ ನಡವಳಿಗಳನ್ನು ವಿಡಿಯೋಗ್ರಾಫ್ ಮಾಡುವುದು.
7. ತಾಲ್ಲೂಕು ಮಟ್ಟದ ಸಮಿತಿ ಆಯ್ಕೆ ಪ್ರಕ್ರಿಯೆಯನ್ನು ಪ್ರತಿ ವರ್ಷ ಸೆಪ್ಟೆಂಬರ್ ತಿಂಗಳ ಒಳಗೆ ಪೂರ್ಣಗೊಳಿಸುವುದು. ಒಂದು ವೇಳೆ ಪೂರ್ಣಗೊಳಿಸದೇ ಇದ್ದಲ್ಲಿ ಅವುಗಳನ್ನು ಜಿಲ್ಲಾಧಿಕಾರಿಗಳು ಅಕ್ಟೋಬರ್ ತಿಂಗಳೊಳಗೆ ಆಯ್ಕೆ ಮಾಡುವುದು.
8. ಸದರಿ ಸಮಿತಿಯ ನಡವಳಿಯನ್ನು ಪಾರದರ್ಶಕವಾಗಿ ಯಾವುದೇ ಲೋಪ-ದೋಷಗಳು ಇಲ್ಲದೆ ಹೊರಡಿಸಬೇಕು. ಅವರಲ್ಲಿ ಲೋಪ-ದೋಷಗಳು ಇದ್ದಲ್ಲಿ ಸದರಿ ಸಮಿತಿಯ ಕಾರ್ಯದರ್ಶಿಗಳು ಹೊಣೆಗಾರರಾಗಿರುತ್ತಾರೆ

ಆಯ್ಕೆಯಾದ ಪಟ್ಟಿಯನ್ನು ತಕ್ಷಣವೇ ಕೇಂದ್ರ ಕಛೇರಿಗಳಿಗೆ ಕಳುಹಿಸತಕ್ಕದ್ದು ಮತ್ತು ಆಯ್ಕೆಯಲ್ಲಿ ಬದಲಾವಣೆ ಇದ್ದಲ್ಲಿ ಸದರಿ ಸಮಿತಿ ಸೂಕ್ತ ಕಾರಣಗಳನ್ನು ನೀಡಿ ಬದಲಿಸಬಹುದು.

10. ಆಯ್ಕೆಯಾದ ಫಲಾನುಭವಿಗಳ ಪಟ್ಟಿಯನ್ನು ಗ್ರಾಮವಾರು ಕಛೇರಿಯ ನೋಟೀಸು ಬೋರ್ಡಿನಲ್ಲಿ ಮರುದಿನ ಪ್ರದರ್ಶಿಸುವುದು.
11. ವಿವೇಚನಾ ಕೋಟಾದಲ್ಲಿ ಸಹ ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ಮತ್ತು ಇತರ ಅಧಿಕಾರಿಗಳನ್ನು ಸೇರಿಸಿಕೊಂಡು ಫಲಾನುಭವಿಗಳನ್ನು ಆಯ್ಕೆ ಮಾಡುವುದು.
12. ಸದರಿ ಸಮಿತಿ ಅರ್ಜಿದಾರರ ದೂರುಗಳನ್ನು ಸಹ ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳುವುದು. ಸದರಿ ಸಮಿತಿ ಸಹ ಕೊನೆ ದಿನಾಂಕವನ್ನು ನಿಗದಿಪಡಿಸಿ ಅರ್ಜಿಗಳನ್ನು ಆಹ್ವಾನಿಸಿ ಆಯ್ಕೆ ಮಾಡುವುದು.

ಮುಂದುವರಿದು ಉಲ್ಲೇಖ (2)ರ ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ನಿಯಮಗಳು-2017 ನಿಯಮ-9(3) ಇದರಲ್ಲಿ ಸಹ ಫಲಾಪೇಕ್ಷಿಗಳನ್ನು ಗುರುತಿಸಿ ಆಯ್ಕೆ ಮಾಡುವ ಬಗ್ಗೆ ವಿವರಿಸಲಾಗಿದೆ.

ಮಾನ್ಯ ಲೋಕಾಯುಕ್ತರು ನೀಡಿದ ಮಾರ್ಗದರ್ಶನಗಳಂತೆ ಮತ್ತು ಮೇಲ್ಕಂಡ ನಿಯಮಗಳ ಪ್ರಕಾರ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿಗಮಗಳು ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳಿಗೆ ಫಲಾಪೇಕ್ಷಿಗಳನ್ನು ಆಯ್ಕೆ ಮಾಡುವಾಗ ಈ ಕೆಳಕಂಡ ನಿರ್ದೇಶನಗಳನ್ನು ಅನುಸರಿಸಲು ಈ ಮೂಲಕ ಸೂಚಿಸಲಾಗಿದೆ:

1. ಸದರಿ ನಿಗಮಗಳು ಅರ್ಜಿಗಳನ್ನು ಆಹ್ವಾನಿಸುವಾಗ ಕೊನೆ ದಿನಾಂಕ ನಿಗದಿಪಡಿಸಿ ಮತ್ತು ಸದರಿ ದಿನಾಂಕದ ಒಳಗೆ ಬಂದ ಅರ್ಜಿಗಳನ್ನು ಮಾತ್ರ ಪರಿಗಣಿಸತಕ್ಕದ್ದು. ನಿಗದಿಪಡಿಸಿದ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಬಾರದು.
2. ಬಂದಿರುವ ಅರ್ಜಿಗಳನ್ನು ವಿವಿಧ ಯೋಜನೆಗಳ ಮಾರ್ಗಸೂಚಿ/ನಿಯಮಗಳಂತೆ ಪರಿಶೀಲಿಸಿ ಅರ್ಹ ಫಲಾಪೇಕ್ಷಿಗಳ ಪಟ್ಟಿಯನ್ನು ತಯಾರಿಸಿ ನಿಗಮದ/ಸಮಾಜ ಕಲ್ಯಾಣ ಇಲಾಖೆಯ/ತಾಲ್ಲೂಕು ಕಛೇರಿಯಲ್ಲಿ ಮತ್ತು ಸಂಬಂಧಿಸಿದ ಗ್ರಾಮ ಪಂಚಾಯಿತಿಗಳಲ್ಲಿ ನೋಟೀಸು ಬೋರ್ಡಿನಲ್ಲಿ ಪ್ರದರ್ಶಿಸುವುದು. ನಂತರ ಸದರಿ ಪಟ್ಟಿಯನ್ನು ತಾಲ್ಲೂಕು ಮಟ್ಟದ ಆಯ್ಕೆ ಸಮಿತಿ ಮುಂದೆ ಸಲ್ಲಿಸುವುದು.
3. ಅರ್ಹ ಅಭ್ಯರ್ಥಿಗಳು ನಿಗದಿಪಡಿಸಿದ ಗುರಿಗಳಿಗಿಂತ ಹೆಚ್ಚಾಗಿ ಇದ್ದಲ್ಲಿ ಕಾಯ್ದಿರಿಸಿದ ಪಟ್ಟಿಯನ್ನು ತಯಾರಿಸಿ, ಮುಂದಿನ ವರ್ಷದ ಆಯ್ಕೆಯಲ್ಲಿ ಅವರಿಗೆ ಆದ್ಯತೆ ನೀಡುವುದು. ಕಾಯ್ದಿರಿಸಿದ ಪಟ್ಟಿಯಲ್ಲಿರುವ ಅರ್ಹ ಅಭ್ಯರ್ಥಿಗಳು ಮತ್ತೊಮ್ಮೆ ಅರ್ಜಿಯನ್ನು ಸಲ್ಲಿಸುವ ಅವಶ್ಯಕತೆ ಇಲ್ಲ. ಆದರೆ, ಹೊಸ ಅರ್ಜಿದಾರರು ಅರ್ಜಿಗಳನ್ನು ಸಲ್ಲಿಸಬಹುದು.
4. ಜಿಲ್ಲೆಗೆ/ವಿಧಾನಸಭಾ ಕ್ಷೇತ್ರಕ್ಕೆ ನೀಡಿದ ಗುರಿಯನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿವಿಧ ಜಾತಿಗಳ ಜನಸಂಖ್ಯೆಯ ಆಧಾರದ ಮೇಲೆ ಫಲಾನುಭವಿಗಳನ್ನು ಆಯ್ಕೆ ಮಾಡುವುದು ಮುಖ್ಯವಾಗಿ ಬಡವರಲ್ಲಿ ಅತಿ ಬಡವರನ್ನು ಆಯ್ಕೆ ಮಾಡುವುದು.
5. ಆಯ್ಕೆ ಸಮಿತಿ ಸಭೆಯ ನಡವಳಿಗಳನ್ನು ವಿಡಿಯೋಗ್ರಾಫ್ ಮಾಡುವುದು.
6. ಆಯ್ಕೆ ಸಮಿತಿಯು ಆಯ್ಕೆ ಪ್ರಕ್ರಿಯೆಯನ್ನು ಪ್ರತಿ ವರ್ಷ ನವೆಂಬರ್ ತಿಂಗಳ ಒಳಗೆ ಪೂರ್ಣಗೊಳಿಸುವುದು. ಒಂದು ವೇಳೆ ಪೂರ್ಣಗೊಳಿಸದಿದ್ದಲ್ಲಿ ಅಂತಹ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸಿ ಸರ್ಕಾರದ ಆದೇಶದಂತೆ ಕ್ರಮ ಜರುಗಿಸುವುದು.
7. ಸದರಿ ಸಮಿತಿಗಳ ನಡವಳಿಯನ್ನು ಪಾರದರ್ಶಕವಾಗಿ ಯಾವುದೇ ಲೋಪ-ದೋಷಗಳು ಇಲ್ಲದೆ ರೂಪಿಸತಕ್ಕದ್ದು. ಇದರಲ್ಲಿ ಲೋಪ-ದೋಷಗಳು ಇದ್ದಲ್ಲಿ ಸದರಿ ಸಮಿತಿಯ ಕಾರ್ಯದರ್ಶಿಗಳು ಹೊಣೆಗಾರರಾಗುತ್ತಾರೆ.
8. ಆಯ್ಕೆಯಾದ ಪಟ್ಟಿಯನ್ನು ತಕ್ಷಣವೇ ಸಂಬಂಧಿಸಿದ ನಿಗಮಗಳ ಕೇಂದ್ರ ಕಛೇರಿಗಳಿಗೆ ಕಳುಹಿಸತಕ್ಕದ್ದು.

9. ಆಯ್ಕೆಯಾದ ಫಲಾನುಭವಿಗಳ ಪಟ್ಟಿಯನ್ನು ಕ್ರಮವಾಗಿ ತಾಲ್ಲೂಕು ನಿಗಮದ ಕಛೇರಿಯ ಅಥವಾ ಸಮಾಜ ಕಲ್ಯಾಣ ಇಲಾಖಾ ಕಛೇರಿಗಳ ನೋಟೀಸು ಬೋರ್ಡಿನಲ್ಲಿ ಮರುದಿನ ಪ್ರದರ್ಶಿಸುವುದು.
10. ಸದರಿ ಸಮಿತಿಗಳು ಅರ್ಜಿದಾರರ ದೂರುಗಳನ್ನು ಸಹ ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳುವುದು
11. ಬ್ಯಾಂಕ್ ಲಿಂಕ್ಡ್ ಸ್ವಯಂ ಉದ್ಯೋಗ/ಐ.ಎಸ್.ಬಿ.ಯೋಜನೆ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಅರ್ಜಿಗಳನ್ನು ಸಂಬಂಧಿಸಿದ ಬ್ಯಾಂಕುಗಳಿಗೆ ಕಳುಹಿಸತಕ್ಕದ್ದು ಮತ್ತು ಅರ್ಜಿಗಳ ಮಂಜೂರಾತಿ ಬಗ್ಗೆ ಬ್ಯಾಂಕ್ ಅಧಿಕಾರಿಗಳ ಜೊತೆ ಮತ್ತು ಆಯ್ಕೆಯಾದ ಅಭ್ಯರ್ಥಿಗಳನ್ನು ಸಹ ಸೇರಿಸಿಕೊಂಡು ಚರ್ಚಿಸಿ ಮಂಜೂರಾತಿ ಪಡೆಯುವುದು. ಯೋಜನೆಗಳ ಷರತ್ತುಗಳಂತೆ ಸಹಾಯಧನವನ್ನು ಸಹ ಬ್ಯಾಂಕುಗಳಿಗೆ ಒದಗಿಸುವುದು.
12. ಬ್ಯಾಂಕುಗಳಿಂದ ಪಡೆದ ಸಾಲವನ್ನು ಸಾಲದ ಷರತ್ತುಗಳಂತೆ ವಸೂಲಾತಿಯಲ್ಲಿ ಸಹ ನಿಗಮದ ಅಧಿಕಾರಿಗಳು ಮತ್ತು ಆಯ್ಕೆ ಸಮಿತಿ ಸದಸ್ಯರು ಬ್ಯಾಂಕ್ ಅಧಿಕಾರಿಗಳಿಗೆ ಸೂಕ್ತ ಸಹಕಾರ ನೀಡಿ ಸಹಾಯ ಮಾಡತಕ್ಕದ್ದು.

(ಗೋಪಾಲ್)
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:

1. ಎಲ್ಲಾ ಜಿಲ್ಲಾಧಿಕಾರಿಗಳಿಗೆ.
2. ಎಲ್ಲಾ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಡಾ:ಬಾಬು ಜಗಜೀವನ ರಾಂ ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು .
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಆದಿಜಾಂಬವ ಅಭಿವೃದ್ಧಿ ನಿಗಮ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿ-1, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.



# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿಗಮಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಮಿತಿಗೆ ಲೋಕಸಭೆ ಮತ್ತು ರಾಜ್ಯಸಭೆಯ ಸದಸ್ಯರುಗಳನ್ನು ನೇಮಕ ಮಾಡುವ ಬಗ್ಗೆ.

**ಓದಲಾಗಿದೆ:-** ಸರ್ಕಾರದ ಆದೇಶ ಸಂಖ್ಯೆ: ಸಕಇ 221 ಬಿಸಿಎ 2008, ದಿ: 02-01-2009.

***

**ಪ್ರಸ್ತಾವನೆ:-**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 02-01-2009 ರ ಸರ್ಕಾರದ ಆದೇಶದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಡಾ॥ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳಿಂದ ಅನುಷ್ಠಾನಗೊಳಿಸುವ ಯೋಜನೆಯಡಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಈ ಕೆಳಕಂಡಂತೆ ಅಧ್ಯಕ್ಷರು/ಸದಸ್ಯರನ್ನೊಳಗೊಂಡ ಆಯ್ಕೆ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

| | | |
|---|---|---|
| 1 | ವಿಧಾನಸಭಾ ಕ್ಷೇತ್ರದ ಶಾಸಕರು | ಅಧ್ಯಕ್ಷರು |
| 2 | ಆಯಾ ಲೋಕಸಭಾ ಕ್ಷೇತ್ರದ ಸದಸ್ಯರು | ಸದಸ್ಯರು |
| 3 | ಆಯಾ ರಾಜ್ಯ ಸಭಾ ಕ್ಷೇತ್ರದಲ್ಲಿ ಖಾಯಂ ಆಗಿ ವಾಸಿಸುವಂತಹ ರಾಜ್ಯ ಸಭಾ ಸದಸ್ಯರು | ಸದಸ್ಯರು |
| 4 | ತಾಲ್ಲೂಕಿನಲ್ಲಿ ಖಾಯಂ ಆಗಿ ವಾಸಿಸುತ್ತಿರುವ ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| 5 | ತಾಲ್ಲೂಕು ಕಾರ್ಯ ನಿರ್ವಹಣಾಧಿಕಾರಿ | ಸದಸ್ಯರು |
| 6 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಜಿಲ್ಲಾ ಪಂಚಾಯತ್ | ಸದಸ್ಯರು |
| 7 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ | ಸದಸ್ಯರು |
| 8 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ವಿದ್ಯುತ್ ಶಕ್ತಿ ಮಂಡಳಿ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ) | ಸದಸ್ಯರು |
| 9 | ತಾಲ್ಲೂಕು ಸಹಾಯಕ ನಿರ್ದೇಶಕರು, ತೋಟಗಾರಿಕಾ ಇಲಾಖೆ | ಸದಸ್ಯರು |
| 10 | ಸಂಬಂಧಿಸಿದ ತಾಲ್ಲೂಕು ತಹಶೀಲ್ದಾರರು | ಸದಸ್ಯರು |
| 11 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯರು |
| 12 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ರೇಷ್ಮೆ/ತೋಟಗಾರಿ ಇಲಾಖೆ | ಸದಸ್ಯರು |
| 13 | ಸಂಬಂಧಿಸಿದ ಜಿಲ್ಲೆಯ ಅರಣ್ಯಾಧಿಕಾರಿ | ಸದಸ್ಯರು |
| 14 | ಹಿಂದುಳಿದ ವರ್ಗಗಳ ಇಲಾಖೆಯ ನಿರೀಕ್ಷಕರು | ಸದಸ್ಯರು |
